# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 24 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 06–08–2024 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 02 Issue - 24 | Title- Code: KARKAN 28269 | Chitradurga | Date: 06-08-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಲೋಪದೋಷಗಳ ಬಗ್ಗೆ ನಿರ್ಭೀತಿಯಿಂದ ವರದಿ ಮಾಡಿ: ಶಾಸಕ ರಘುಮೂರ್ತಿ 2

ಹೊಳಲ್ಕೆರೆ: 8 ರಂದು ಮಲ್ಲಿಕಾರ್ಜುನ ಸ್ವಾಮೀಜಿ ಸ್ಮರಣೋತ್ಸವ 3

ಅದ್ದೂರಿ ಶ್ರೀ ಸಿದ್ಧರಾಮೇಶ್ವರ 62ನೇ ರಥೋತ್ಸವ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಪ್ರಧಾನಮಂತ್ರಿ ಆವಾಸ್ ಯೋಜನೆ ವಸತಿ ಅನುದಾನ ಸಮರ್ಪಕ ಬಳಕೆಯಾಗಲಿ : ಸಂಸದ ಗೋವಿಂದ



» ಚಿತ್ರದುರ್ಗ

ಪ್ರಧಾನಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ವಸತಿ ಯೋಜನೆಯಡಿ ರಾಜ್ಯದಲ್ಲಿ ಅದರಲ್ಲೂ ವಿಶೇಷವಾಗಿ ಚಿತ್ರದುರ್ಗ ಹಾಗೂ ತುಮಕೂರು ಜಿಲ್ಲೆಗಳಲ್ಲಿ ವಸತಿ ರಹಿತರಿಗೆ ವಸತಿಯನ್ನು ಒದಗಿಸುವ ದೃಷ್ಟಿಯಿಂದ ಸರ್ವೆ ಕಾರ್ಯವನ್ನು ಏನಾದರು ನಡೆಸಲಾಗಿದೆಯೇ ? ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಮನೆಗಳು ಮಂಜೂರಾಗಿವೆ ? ಎಷ್ಟು ಮನೆಗಳು ಮಂಜೂರಾಗಲು ಬಾಕಿಯಿವೆ ಮತ್ತು ಎಷ್ಟು ಮನೆಗಳು ಪೆಂಡಿಂಗ್ ಇವೆ ? ಅದೇ ರೀತಿ ಎಷ್ಟು ಅನುದಾನ ಮಂಜೂರಾಗಿದೆ, ವಸತಿ ರಹಿತರಿಗೆ ವಸತಿ ಒದಗಿಸಲು ಈ ಯೋಜನೆಯ ಜೊತೆಗೆ ರಾಜ್ಯ ಸರ್ಕಾರಗಳು ಯಾವ ಕ್ರಮ ಕೈಗೊಂಡಿವೆ ಎಂದು ಸಂಸತ್ತಿನಲ್ಲಿ ಸಂಸದ ಗೋವಿಂದ ಕಾರಜೋಳ ಗ್ರಾಮೀಣಾಭಿವೃದ್ಧಿ ಖಾತೆ ರಾಜ್ಯ ಸಚಿವ ಡಾ: ಚಂದ್ರಶೇಖರ ಪೆಮ್ಮಸಾನಿ ಅವರಿಗೆ ಮಾಹಿತಿ ಕೇಳಿದ್ದಾರೆ. ಸಂಸದರ ಪ್ರಶ್ನೆಗೆ ಉತ್ತರ ನೀಡಿರುವ ಸಚಿವರು, ಪ್ರಧಾನಮಂತ್ರಿ ಆವಾಸ್ ಯೋಜನೆ(ಗ್ರಾಮೀಣ) ಯೋಜನೆಯಡಿ ವಸತಿರಹಿತರನ್ನು ಗುರುತಿಸುವ ಕಾರ್ಯ 2011 ರಲ್ಲಿ ನಡೆದ ಸಾಮಾಜಿಕ ಆರ್ಥಿಕ ಜಾತಿ ಗಣತಿಯಲ್ಲಿ ಸೂಚಿಸಲಾದ ಮಾನದಂಡಗಳ ಮೇಲೆ ನಡೆಯುತ್ತದೆ. ಈ ರೀತಿ ಗುರುತಿಸುವ ವಸತಿ ರಹಿತರನ್ನು ಗ್ರಾಮಸಭೆಗಳ ಮೂಲಕ ಅಂತಿಮಗೊಳಿಸಲಾಗುತ್ತದೆ. ಸರ್ಕಾರ 2018 ರ ಜನವರಿಯಿಂದ 2019 ರ ಮಾರ್ಚ್ ವರೆಗೆ ಆವಾಸ್ ಯೋಜನೆಯ ಸರ್ವೆ ಕಾರ್ಯ ನಡೆಸಲಾಗಿದೆ ಎಂದಿದ್ದಾರೆ. ಈ ಸರ್ವೆ ಕಾರ್ಯದಲ್ಲಿ ಬಿಟ್ಟು ಹೋದವರನ್ನು ಪುನ: ಹೆಚ್ಚುವರಿ ಪಟ್ಟಿಯಲ್ಲಿ ಸೇರ್ಪಡೆ ಮಾಡಲಾಗಿದೆ ಮತ್ತು ಒಟ್ಟು 3.90 ಕೋಟಿ ಅರ್ಹ ಕುಟುಂಬಗಳು ಈ ಸರ್ವೆಯಲ್ಲಿ ನೊಂದಾಯಿಸಿಕೊಂಡಿವೆ. ಗ್ರಾಮಸಭೆಗಳಲ್ಲಿ ಈ ನೊಂದಣಿಯನ್ನು ಪರಿಶೀಲನೆ ನಡೆಸಿದ ನಂತರ ಈ ಸಂಖ್ಯೆ 2.95 ಕೋಟಿ ಕುಟುಂಬಗಳು ವಸತಿಗಾಗಿ ಅರ್ಹತೆ ಹೊಂದಿವೆ ಎಂಬುದನ್ನು ಅಂತಿಮಗೊಳಿಸಲಾಗಿದೆ .ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ 2.95 ಕೋಟಿ ಮನೆಗಳ ಒಟ್ಟಾರೆ ಕಡ್ಡಾಯ ಗುರಿಯನ್ನು ಈಗಾಗಲೇ ರಾಜ್ಯಗಳಿಗೆ ಹಂಚಿಕೆ ಮಾಡಲಾಗಿದೆ. ಇದಕ್ಕೆ ಪೂರಕವಾಗಿ 2.94 ಕೋಟಿಗೂ ಹೆಚ್ಚು ಮನೆಗಳನ್ನು ಮಂಜೂರು ಮಾಡಲಾಗಿದೆ, 2.64 ಕೋಟಿ ಮನೆಗಳನ್ನ ಈಗಾಗಲೇ ನಿರ್ಮಾಣ ಮಾಡಲಾಗಿದೆ. ಒಟ್ಟಾರೆಯಾಗಿ 2011 ರ ಸಾಮಾಜಿಕ ಆರ್ಥಿಕ ಜಾತಿ ಗಣತಿಯಲ್ಲಿ ಹಾಗೂ 2018 ರ ವಸತಿ ಸಮೀಕ್ಷೆಯಂತೆ ಚಿತ್ರದುರ್ಗ ಜಿಲ್ಲೆಯಲ್ಲಿ 56,605 ಮತ್ತು ತುಮಕೂರು ಜಿಲ್ಲೆಯಲ್ಲಿ 77,871 ಅರ್ಹ ಕುಟುಂಬಗಳು ವಸತಿಗಾಗಿ ಬೇಡಿಕೆ ಪಟ್ಟಿಯಲ್ಲಿದ್ದಾರೆ. ಇದಕ್ಕೆ ಪೂರಕವಾಗಿ ಪ್ರಧಾನಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)ಯಡಿ 2016–17 ರಿಂದ 2023–24 ರವರೆಗೆ ಚಿತ್ರದುರ್ಗ ಜಿಲ್ಲೆಗೆ ಸುಮಾರು 1895 ಮನೆಗಳು ಹಾಗೂ ತುಮಕೂರು ಜಿಲ್ಲೆಗೆ ಸುಮಾರು 1548 ಮನೆಗಳು ಮಂಜೂರಾಗಿವೆ ಹೀಗಿದ್ದೂ ಕೂಡ ಮಂಜೂರಾಗಿರುವ ಮನೆಗಳಲ್ಲಿ ಶೇಕಡ 30 ರಷ್ಟು ಮನೆಗಳ ನಿರ್ಮಾಣ ಕಾರ್ಯ ಇನ್ನೂ ಮುಗಿದಿಲ್ಲ ಎಂದು ಸಚಿವರು ಲೋಕಸಭೆಯಲ್ಲಿ ಉತ್ತರ ನೀಡಿದ್ದಾರೆ.

# ಪರಶುರಾಂಪುರ ಸರಕಾರಿ ಆಸ್ಪತ್ರೆಗೆ ಖಾಯಂ ವೈದ್ಯರಿಗಾಗಿ ಪ್ರತಿಭಟನೆ

» ಪರಶುರಾಂಪುರ




ಆಸ್ಪತ್ರೆಗೆ ಖಾಯಂ ವೈದ್ಯರನ್ನ ನೇಮಿಸಬೇಕೆಂದು ಆಸ್ಪತ್ರೆಯ ಮುಂಭಾಗದಲ್ಲಿ ರೈತರು ಪ್ರತಿಭಟನೆ ನಡೆಸಿದ ಘಟನೆ ಸೋಮವಾರ ನಡೆದಿದೆ.

ಗ್ರಾಮದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಖಾಯಂ ವೈದ್ಯರ ನೇಮಕ್ಕಾಗಿ ಒತ್ತಾಯಿಸಿ ಮುಖ್ಯ ವೃತ್ತದಲ್ಲಿ ಮಾನವ ಸರಪಳಿ ರಚಿಸಿ ಘೋಷಣೆಗಳು ಮೂಲಕ ಆಸ್ಪತ್ರೆಯ ತನಕ ಕಾಲ್ನಡಿಗೆಯಲ್ಲಿ ಅಖಂಡ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಆಸ್ಪತ್ರೆಯ ಮುಂಭಾಗ ಪ್ರತಿಭಟನೆ ಮೂಲಕ ಒತ್ತಾಯಿಸಿದರು.

ಮನವಿ ನೀಡಿದರೂ ಅದರ ನಡುವೆ ಪತ್ರಿಕೆಗಳ ವರದಿ ಬಂದರೂ ಎಚ್ಚೆತ್ತುಕೊಳ್ಳದೆ ನಿರ್ಲಕ್ಷವಹಿಸುತ್ತಿರುವುದ ಖಂಡನೀಯ ಎಂಬ ಘೋಷಣೆಗಳು ಕೂಗಿದರು.

ಸಾರ್ವಜನಿಕವಾದ ಕೆಲಸಕ್ಕೆ ಬೆಳಿಗ್ಗೆಯಿಂದ ಸಂಜೆಯಾದರೂ ಅಧಿಕಾರಿಗಳು ಬಂದಿಲ್ಲ ರೈತರೆಂದರೇ ಇಷ್ಟು ಕಡಗಣೆಯೇ ಆಕ್ರೋಶವನ್ನ ಹೊರಹಾಕಿದರು. ಆಡಳಿತಾಧಿಕಾರಿಗಳ ಜತೆ ತಾಲೂಕು ಆರೋಗ್ಯಾಧಿಕಾರಿಗಳು ಬಂದರೂ ಪಟ್ಟು ಬಿಡದ ರೈತ ಸಂಘದ ಪದಾಧಿಕಾರಿಗಳು. ಡಿಎಚ್ಓ ಸ್ಥಳಕ್ಕೆ ಬರಬೇಕು ಎಂದು ಸಭೆಯಲ್ಲಿ ಮಾತನಾಡಿದರು.

ಸಂಘದ ಅಧ್ಯಕ್ಷ ಚಿಕ್ಕಣ್ಣ ಮಾತನಾಡಿ, ಆಸ್ಪತ್ರೆಗೆ ಮಹಿಳಾ ವೈದ್ಯಾಧಿಕಾರಿ ಹಾಗೂ ಖಾಲಿ ಇರುವ ವೈದ್ಯರ ಹುದ್ದೆ ನೇಮಕ ಮಾಡಬೇಕು. ರೋಗಿಗಳಿಗೆ ಸಮರ್ಪಕವಾಗಿ ಸೂಕ್ತವಾಗಿ ಸಿಗಬೇಕು ಎಂದು ದೂರಿದರು.

ಕೇಂದ್ರವು ಸಮಸ್ಯೆಗಳ ಆಗರವಾಗಿದ್ದು, ಚಿಕಿತ್ಸೆ ಪಡೆಯಲು ಬಂದ ರೋಗಿಗಳು ವೈದ್ಯರಿಗಾಗಿ ಪರದಾಡುವ ಸ್ಥಿತಿ ಉಂಟಾಗಿದೆ ಎಂದು ಆರೋಪಿಸಿದ ಅವರು ತಾತ್ಕಾಲಿಕ ಬಂದ ವೈದ್ಯರಿಂದ ಎಲ್ಲವನ್ನ ನೋಡಿಕೊಳ್ಳಲು ಆಗದು ಎಂದರು.ಪ್ರಧಾನ ಕಾರ್ಯದರ್ಶಿ ಚೌಳೂರು ಪ್ರಕಾಶ್ ಮಾತನಾಡಿ, ಕೇಂದ್ರದ ವ್ಯಾಪ್ತಿಯಲ್ಲಿ ಸುಮಾರು ಹಳ್ಳಿಗಳಿದ್ದು, ನಿತ್ಯ ನೂರಾರು ರೋಗಿಗಳು ಆಸ್ಪತ್ರೆಗೆ ಬಂದು ಹೋಗುತ್ತಾರೆ. ಇಲ್ಲಿ ಮಹಿಳಾ ವೈದ್ಯರಿಲ್ಲದ್ದರಿಂದ ಮಹಿಳಾ ರೋಗಿಗಳು ದೂರದ ದೊಡ್ಡ ಆಸ್ಪತ್ರೆಗಳಿಗೆ ಅಲೆದಾಡಬೇಕಾಗಿದೆ ಎಂದು ಆರೋಪಿಸಿದರು.

ಆಸ್ಪತ್ರೆ ಮುಂಭಾಗ 24*7 ಆರೋಗ್ಯ ಸೇವೆ ನೀಡುತ್ತೇವೆ ಎಂದು ನಾಮ ಫಲಕ ಹಾಕಿಲಾಗಿದೆ. ಆದರೆ 24 ಘಂಟೆ ಸೇವೆಗೆ ಸಿಬ್ಬಂದಿಗಳ ಕೊರತೆ ಇದೆ. ಜಿಲ್ಲಾ ಆರೋಗ್ಯಾಧಿಕಾರಿಗಳು ತಕ್ಷಣ ಸಮಸ್ಯೆ ಪರಿಹಾರಕ್ಕೆ ಕ್ರಮಕೈಗೊಳ್ಳದಿದ್ದರೆ ಅಹೋರಾತ್ರಿ ಧರಣಿ ಸಿದ್ದತೆ ಹಾಗೂ ಹೋರಾಟ ರೂಪುರೇಷೆ ಈಗಾಗಲೇ ರೂಪುಗೊಂಡಿದೆ ಎಂದು ಎಚ್ಚರಿಸಿದರು.

**ಮಳೆಯಲ್ಲೂ ವೈದ್ಯರಿಗಾಗಿ ರೈತರಿಂದ ಪ್ರತಿಭಟನೆ:** ವಿಷಯ ತಿಳಿದು ಸ್ಥಳಕ್ಕೆ ಆಡಳಿತ ವೈದ್ಯಾಧಿಕಾರಿ ಡಾ. ಅಭಿನವ ಹಾಗೂ ತಾಲೂಕು ಆರೋಗ್ಯಾಧಿಕಾರಿ ಡಾ.ಕಾಶಿ ಭೇಟಿ ನೀಡಿದ ವೇಳೆಯಲ್ಲಿ ಡಿಟಿಎಚ್ ಓ ಬರಬೇಕು ಸಮಸ್ಯೆ ಆಲಿಸಿ ಗಡಿಭಾಗದ ಆಸ್ಪತ್ರೆಗೆ ವೈದ್ಯರ ಅವಶ್ಯ ವೈದ್ಯರ ನೇಮಕವಾಗುವು ತನಕ ಪ್ರತಿಭಟನೆ ಹಿಂಪಡೆಯುವುದಿಲ್ಲ ಎಂದು ಮಳೆಯಲ್ಲಿ ಪಟ್ಟು ಹಿಡಿದ ಘಟನೆಯು ನಡೆಯಿತು.

ಈ ಸಂದರ್ಭದಲ್ಲಿ ಖಾಯಂ ವೈದ್ಯರ ನೇಮಕ್ಕಾಗಿ ಸಂಬಂಧ ಪಟ್ಟ ಅಧಿಕಾರಿಗಳ ಹಾಗೂ ಇಲಾಖೆಯ ಗಮನಕ್ಕೆ ತರುವುದರ ಜತೆ ಹದಿನೈದು ದಿನಗಳಲ್ಲಿ ಬಗೆಹರಿಸುವ ಪ್ರಯತ್ನ ಮಾಡಲಾಗುವುದು ಎಂದೇಳಿದಾಗ ಪ್ರತಿಭಟನೆಯನ್ನ ಹಿಂಪಡೆದರು.ಈ ವೇಳೆಯಲ್ಲಿ ಅಖಂಡ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಈ ವೇಳೆಯಲ್ಲಿ ಡಾ.ಅಭಿನವ ಮಾತನಾಡಿ, ಈಗಾಗಲೇ ಬೇರೆ ಕಡೆಯಿಂದ ಡೆಪ್ಟೇಷನ್ ಮೂಲಕ ಆಸ್ಪತ್ರೆಗೆ ವೈದ್ಯರನ್ನ ಕರ್ತವ್ಯಕ್ಕೆ ನೇಮಕ ಮಾಡಲಾಗಿದೆ.ಖಾಯಂ ವೈದ್ಯರ ನೇಮಕಕ್ಕೆ ಮೇಲಾಧಿಕಾರಿಗಳ ಗಮನಕ್ಕೆ ತರಲಾಗಿದೆ.ಸದ್ಯ ವರ್ಗಾವಣೆ ಇರುವ ಕಾರಣ ಇಲ್ಲಿಗೆ ಬರುವ ನಿರೀಕ್ಷೆ ಇದೆ ಎಂದರು.

ಟಿಎಚ್ಓ ಡಾ.ಕಾಶಿ ಮಾತನಾಡಿ, ಖಾಯಂ ವೈದ್ಯರ ನೇಮಕ್ಕಾಗಿ ಜಿಲ್ಲಾ ಹಾಗೂ ರಾಜ್ಯ ಮಟ್ಟದ ಅಧಿಕಾರಿಗಳ ಗಮನಕ್ಕೆ ತರಲಾಗುವುದು ಜತೆಗೆ ಬೇರೆ ಕಡೆಯಿಂದ ವೈದ್ಯರ ನೇಮಕದ ಮೂಲಕ ಆಸ್ಪತ್ರೆಯಲ್ಲಿ ತೊಂದರೆ ಉಂಟಾದಂತೆ ನೋಡಿಕೋಳ್ಳಲಾಗುವುದು ಎಂದರು.

## ಕೊನೆಗೂ ಬಂದ ನಗರಸಭೆಯ ಹೊಸ ಮೀಸಲಾತಿ ಪಟ್ಟಿ : ಅಧ್ಯಕ್ಷ ಸ್ಥಾನಕ್ಕೆ ಬಿಸಿಎಂಬಿ ಏಕೈಕ ಮಹಿಳೆ ಎಂ.ಸಾವಿತ್ರಮ್ಮ: ಉಪಾಧ್ಯಕ್ಷ ಸ್ಥಾನಕ್ಕೆ ಪೈಪೋಟಿ

» ಚಳ್ಳಕೆರೆ



ಇಲ್ಲಿನ ನಗರಸಭೆಯ ಅಧ್ಯಕ್ಷರ, ಉಪಾಧ್ಯಕ್ಷರ ಮೀಸಲಾತಿ ದಿಢೀರನೆ ಪ್ರಕಟಗೊಂಡ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಅಧ್ಯಕ್ಷ, ಉಪಾಧ್ಯಕ್ಷ ಆಯ್ಕೆ ಗರಿಗೆದರಿದ ಚಟುವಟಿಕೆಗಳು. ಬಹುತೇಕ ಎಲ್ಲಾ ಪಕ್ಷದ ಚುನಾಯಿತ ಸದಸ್ಯರು ನಿರೀಕ್ಷಿಸಿದಂತೆ ಮೀಸಲಾತಿ ಪ್ರಕಟಗೊಳ್ಳದ ಹಿನ್ನೆಲೆಯಲ್ಲಿ ಬೇಸರವಾದರೂ ಸದಸ್ಯರು ಸರ್ಕಾರನೂತನಮೀಸಲಾತಿ ಯನ್ನು ಒಪ್ಪಿಕೊಳ್ಳುವ ಅನಿವಾರ್ಯತೆ ಉಂಟಾ ಗಿದೆ.

ಪ್ರಸ್ತುತನಗರಸಭೆಯಲ್ಲಿ 31 ಸದಸ್ಯರಿದ್ದು, ಕಾಂಗ್ರೆಸ್ ಪಕ್ಷದ ಆಡಳಿತದಲ್ಲಿದೆ, ಕಳೆದ ನವೆಂಬರ್ 2020ರಲ್ಲಿ ನಗರಸಭೆಯ ಆಡಳಿತ ಪ್ರಾರಂಭಗೊಂಡಿದ್ದು, ಸಾಮಾನ್ಯ ಮಹಿಳೆ ಮೀಸಲಾತಿಯಲ್ಲಿ ಮೊದಲ ಬಾರಿಗೆ ಜಯಲಕ್ಷ್ಮಿ ಕೃಷ್ಣಮೂರ್ತಿ, ಎರಡನೇ ಬಾರಿಗೆ ಸುಮಕ್ಕ ಆಂಜಿನಪ್ಪ ಅಧ್ಯಕ್ಷರಾಗಿ ಅಧಿಕಾರ ಚಲಾಯಿಸಿದ್ದಾರೆ.


ಪುಟ 2


# ಸುಪ್ರೀಂ ನಿರ್ದೇಶನದಂತೆ ಸ್ಥಳೀಯ ಸಂಸ್ಥೆಗಳಿಗೆ ಮೀಸಲಾತಿ ಪ್ರಕಟ

» ನಮ್ಮಜನ. ಸಮಾಚಾರ

ಬೆಂಗಳೂರು: ಸುಪ್ರೀಂ ಕೋರ್ಟ್ ನಿರ್ದೇಶನದಂತೆ ನಗರಾಭಿವೃದ್ಧಿ ಇಲಾಖೆಯು ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಿಗೆ ಅಧ್ಯಕ್ಷ – ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿ ಪಟ್ಟಿ ಬಿಡುಗಡೆ ಮಾಡಿದೆ.61 ನಗರಸಭೆ, 123 ಪುರಸಭೆ ಹಾಗೂ 117 ಪಟ್ಟಣ ಪಂಚಾಯಿತಿಗಳ ಅಧ್ಯಕ್ಷ–ಉಪಾಧ್ಯಕ್ಷ ಹುದ್ದೆಗಳಿಗೆ ಮೀಸಲಾತಿ ಪಟ್ಟಿ ಪ್ರಕಟಿಸಲಾಗಿದೆ. 61 ನಗರ ಸಭೆಗಳಲ್ಲಿನ ಅಧ್ಯಕ್ಷ ಹುದ್ದೆಗಳ ಪೈಕಿ 16ನ್ನು ಸಾಮಾನ್ಯ ವರ್ಗಕ್ಕೆ ನೀಡಲಾಗಿದೆ. ಇನ್ನು 15 ಅಧ್ಯಕ್ಷ ಹುದ್ದೆಗಳನ್ನು ಸಾಮಾನ್ಯ ಮಹಿಳೆಯರಿಗೆ ಮೀಸಲು ಮಾಡಲಾಗಿದೆ.ಚಿತ್ರದುರ್ಗ ಜಿಲ್ಲೆಯ ಮೂರು ನಗರಸಭೆ, ಎರಡು ಪಟ್ಟಣ ಪಂಚಾಯಿತಿ ಹಾಗೂ ಎರಡು ಪುರಸಭೆಗಳಿಗೆ ಮೀಸಲಾತಿ ಪ್ರಕಟಿಸಿದೆ.ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಳ ಅಧ್ಯಕ್ಷ, ಉಪಾಧ್ಯಕ್ಷರ ಮೊದಲನೇ ಎರಡುವರೇ ವರ್ಷದ ಅವಧಿ ಮುಗಿದಿದ್ದು, ಎರಡನೇ ಅವಧಿಗೆ ಮೀಸಲಾತಿಗಾಗಿ ಸದಸ್ಯರು ಸುಮಾರು ಒಂದೂವರೆ ವರ್ಷದಿಂದ ಹಲವು ಹೋರಟಗಳ ಮಾಡುವ ಮೂಲಕ ಜಾತಕ ಪಕ್ಷಿಯಂತೆ ಕಾಯುತ್ತಿದ್ದರು.

### ಚಿತ್ರದುರ್ಗ ನಗರಸಭೆ

- ಅಧ್ಯಕ್ಷ ಸ್ಥಾನ: ಸಾಮಾನ್ಯ ಮಹಿಳೆ,
- ಉಪಾಧ್ಯಕ್ಷ: ಸ್ಥಾನ ಬಿಸಿಎ ಮಹಿಳೆಗೆ

### ಚಳ್ಳಕೆರೆ ನಗರಸಭೆ

- ಅಧ್ಯಕ್ಷ ಸ್ಥಾನ: ಬಿಸಿಎಂ ಬಿ ಮಹಿಳೆ
- ಉಪಾಧ್ಯಕ್ಷ ಸ್ಥಾನ: ಪರಿಶಿಷ್ಟ ಪಂಗಡ(ಎಸ್‌ಟಿ) ಮಹಿಳೆ.

### ಹಿರಿಯೂರು ನಗರಸಭೆ

- ಅಧ್ಯಕ್ಷ ಸ್ಥಾನ ಬಿಸಿಎ,
- ಉಪಾಧ್ಯಕ್ಷ ಸ್ಥಾನ ಪರಿಶಿಷ್ಟ ಜಾತಿ(ಎಸ್ಸಿ) ಮಹಿಳೆ

### ಹೊಸದುರ್ಗ ಪುರಸಭೆ

- ಅಧ್ಯಕ್ಷ ಸ್ಥಾನ: ಪರಿಶಿಷ್ಟ ಪಂಗಡ(ಎಸ್ಟಿ),
- ಉಪಾಧ್ಯಕ್ಷ ಸ್ಥಾನ: ಬಿಸಿಎ ಮಹಿಳೆ.

### ಹೊಳಲ್ಕೆರೆ ಪುರಸಭೆ

- ಅಧ್ಯಕ್ಷ ಸ್ಥಾನ ಪರಿಶಿಷ್ಟ ಜಾತಿ(ಎಸ್ಸಿ),
- ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆ

### ಮೊಳಕಾಲ್ಮೂರು ಪಟ್ಟಣ ಪಂಚಾಯಿತಿ

- ಅಧ್ಯಕ್ಷ ಸ್ಥಾನ: ಸಾಮಾನ್ಯ ಮಹಿಳೆಗೆ,
- ಉಪಾಧ್ಯಕ್ಷ ಸ್ಥಾನ ಸಾಮಾನ್ಯ ವರ್ಗ

### ನಾಯಕನಹಟ್ಟಿ ಪಟ್ಟಣ ಪಂಚಾಯಿತಿ

- ಅಧ್ಯಕ್ಷ ಸ್ಥಾನ ಪರಿಶಿಷ್ಟ ಜಾತಿ(ಎಸ್ಸಿ)
- ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆ

## ಪ್ರಮುಖ ಸುದ್ದಿ

# ಮೈತ್ರಿ ಪಾದಯಾತ್ರೆ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

» ಚಿತ್ರದುರ್ಗ




ಯಾವುದೇ ಕಪ್ಪು ಚುಕ್ಕೆಯಿಲ್ಲದೆ ಎರಡನೆ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯನವರನ್ನು ಹಗರಣದಲ್ಲಿ ಸಿಲುಕಿಸಲು ಬಿಜೆಪಿ. ಮತ್ತು ಜೆಡಿಎಸ್. ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಹೊರಟಿರುವುದಕ್ಕೆ ಪ್ರತಿಯಾಗಿ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ, ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದಿಂದ ಸೋಮವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿ ನಂತರ ಜಿಲ್ಲಾಧಿಕಾರಿ ಮೂಲಕ ರಾಷ್ಟ್ರಪತಿ ಹಾಗೂ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಮಾಜಿ ಸಚಿವ ಹೆಚ್.ಆಂಜನೇಯ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ಬಿಜೆಪಿ. ಜೆಡಿಎಸ್. ಅಧಿಕಾರದಲ್ಲಿದ್ದಾಗ ನಡೆಸಿದ ಅವ್ಯವಹಾರ, ಭ್ರಷ್ಠಾಚಾರ, ಸ್ವಜನಪಕ್ಷಪಾತ ಮರೆತು ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ದ ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಹೊರಟಿದ್ದಾರೆ. ವಾಲ್ಮೀಕಿ ಅಭಿವೃದ್ದಿ ನಿಗಮ ಹಾಗೂ ಮುಡಾ ನಿವೇಶನ ಹಗರಣದಲ್ಲಿ ಸಿದ್ದರಾಮಯ್ಯನವರ ಪಾತ್ರವಿಲ್ಲ. ನಮ್ಮ ಪಕ್ಷದ ಶಾಸಕರನ್ನು ಖರೀಧಿಸಿ ಪ್ರಜಾಪ್ರಭುತ್ವಕ್ಕೆ ಅಪಚಾರವೆಸಗಿ ವಾಮ ಮಾರ್ಗದಿಂದ ಅಧಿಕಾರ ಹಿಡಿದಿದ್ದ ವಿರೋಧಿಗಳು ವಿನಾ ಕಾರಣ ತೇಜೋವಧೆ ಮಾಡಲು ಹೊರಟಿದ್ದಾರೆ. ಸಂವಿಧಾನದ ಪ್ರತಿನಿಧಿಯಾಗಿರಬೇಕಾದ ರಾಜ್ಯಪಾಲರು ಬಿಜೆಪಿ. ಏಜೆಂಟ್‌ನಂತೆ ವರ್ತಿಸುತ್ತಿದ್ದಾರೆಂದು ಟೀಕಿಸಿದರು.

ಮುಖ್ಯಮಂತ್ರಿಗೆ ನೋಟಿಸ್ ಕೊಡುವುದಕ್ಕಿಂತಲೂಮುನ್ನರಾಜ್ಯಪಾಲರು ಯೋಚಿಸಬೇಕಿತ್ತು. ಮುಖ್ಯಮಂತ್ರಿಗಳನ್ನು ಇಳಿಸುವುದು ಸುಲಭವಲ್ಲ. ಸಮಸ್ತ ಶೋಷಿತ ಸಮುದಾಯ ಸಿದ್ದರಾಮಯ್ಯನವರ ಪರವಾಗಿದೆ. ಎದೆಗುಂದುವುದು ಬೇಡ. ಬಿಜೆಪಿ. ಜೆಡಿಎಸ್. ಕುತಂತ್ರ ನಡೆಯಲ್ಲ. 9 ರಂದು ಮೈಸೂರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಹೋಗೋಣ ಎಂದು ಹೇಳಿದರು.

ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್ ಮಾತನಾಡಿ ಸಾಮಾಜಿಕ ನ್ಯಾಯದ ಹರಿಕಾರ, ಬಡವರ ಪರವಾಗಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಅಧಿಕಾರದಿಂದ ಕೆಳಗಿಳಿಸಲು ಬಿಜೆಪಿ. ಮತ್ತು ಜೆಡಿಎಸ್. ಕುತಂತ್ರ ನಡೆಸುತ್ತಿದೆ. ಯಾವುದೆ ಕಳಂಕವಿಲ್ಲದೆ ಅಧಿಕಾರ ನಡೆಸುತ್ತಿರುವ ಸಿದ್ದರಾಮಯ್ಯನವರ ವಿರುದ್ದ ಪಿತೂರಿ ನಡೆಸುತ್ತಿರುವ ವಿರೋಧಿಗಳು ರಾಜ್ಯಪಾಲರ ಮೂಲಕ ನೋಟಿಸ್ ಕೊಡಿಸಿರುವುದರಲ್ಲಿ ಅರ್ಥವಿಲ್ಲ. ರಾಜ್ಯಪಾಲರ ವಿರುದ್ದ ಗೋಬ್ಯಾಕ್ ಚಳುವಳಿ ನಡೆಸುವುದಾಗಿ ಎಚ್ಚರಿಸಿದರು.

ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ರಾಜ್ಯ ಸಂಚಾಲಕ ಬಿ.ಟಿ.ಜಗದೀಶ್ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ಪ್ರಧಾನಿ ಮೋದಿ ಮತ್ತು ಅಮಿತ್‌ಶಾ ಇವರುಗಳು ರಾಜ್ಯಪಾಲರನ್ನು ಕೈಗೊಂಬೆಯನ್ನಾಗಿ ಮಾಡಿಕೊಂಡು ನೋಟಿಸ್ ಜಾರಿ ಮಾಡಿಸಿ ಕಳೆದ 15 ದಿನಗಳಿಂದಲೂ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕಿರುಕುಳ ನೀಡುತ್ತಿದ್ದಾರೆ. ಬಸವರಾಜ್ ಬೊಮ್ಮಾಯಿ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಮುಡಾ ನಿವೇಶನವನ್ನು ಪಡೆದಿರುವುದು. ಭ್ರಷ್ಟಾಚಾರಕ್ಕೆ ಬಿಜೆಪಿ. ಯೇ ಹೊಣೆ. ಕೋತಿ ಮೊಸರನ್ನು ತಿಂದು ಮೇಕೆ ಬಾಯಿಗೆ ಹೊರೆಸಿದಂತಿದೆ ಎಂದು ವ್ಯಂಗ್ಯವಾಡಿದರು.

ಸಿದ್ದರಾಮಯ್ಯನವರು ಮಂತ್ರಿಯಾಗಿ ವಿರೋಧ ಪಕ್ಷದ ನಾಯಕರಾಗಿ ಉಪ ಮುಖ್ಯಮಂತ್ರಿಯಾಗಿ ಎರಡನೆ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾಗಿ ಸ್ವಚ್ಚ ಆಡಳಿತ ನಡೆಸುತ್ತಿರುವುದು ವಿರೋಧ ಪಕ್ಷಗಳಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ. ಇಲ್ಲಿಯವರೆಗೂ ಹದಿನೈದು ಬಜೆಟ್ ಮಂಡಿಸಿ ಎಲ್ಲಾ ನಿಗಮಗಳಿಗೂ ಹಣ ಮಂಜೂರು ಮಾಡಿದ್ದಾರೆ.

## ಫಾಸ್ಟ್ ನ್ಯೂಸ್

### ಅಧ್ಯಕ್ಷ ಸ್ಥಾನಕ್ಕೆ ಬಿಸಿಎಂಬಿ ಏಕೈಕ ಮಹಿಳೆ: ಉಪಾಧ್ಯಕ್ಷ ಸ್ಥಾನಕ್ಕೆ ಪೈಪೋಟಿ

» ಮೊದಲ ಪುಟದಿಂದ

ಕಳೆದ ಮೇ 2023ರಲ್ಲಿ ವಿಧಾನಸಭಾ ಚುನಾವಣಾ ಸಂದರ್ಭದಲ್ಲಿ ಅಧ್ಯಕ್ಷರ ಆಡಳಿತಾವಧಿ ಮುಕ್ತಾಯಗೊಂಡಿತ್ತು. ಅಂದಿನಿಂದ ಜಿಲ್ಲಾಧಿಕಾರಿಗಳ ಮೇಲುಸ್ತುವಾರಿಯಲ್ಲಿ ಆಡಳಿತವನ್ನು ನಡೆಸಲಾಗಿತ್ತು. ಪ್ರಸ್ತುತ ನಗರಸಭೆ ಅಧ್ಯಕ್ಷ–ಉಪಾಧ್ಯಕ್ಷ ಸ್ಥಾನ ಮಹಿಳೆಯರಿಗೆ ಮೀಸಲಾಗಿರುವುದು ವಿಶೇಷವಾಗಿದೆ. ಅಧ್ಯಕ್ಷ ಸ್ಥಾನ ಬಿಸಿಎಂಬಿ ಮಹಿಳೆ ಸ್ಥಾನಕ್ಕೆ ಮೀಸಲಾಗಿದೆ. ಬಿಸಿಎಂಬಿ ಮೀಸಲಾತಿಯಲ್ಲಿ ನಗರದ 21ನೇ ವಾರ್ಡ್‌ನ ಸದಸ್ಯೆ ಎಂ.ಸಾವಿತ್ರಮ್ಮ ಏಕಮಾತ್ರ ಅಭ್ಯರ್ಥಿಯಾಗಿದ್ದಾರೆ. ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗುವ ಸಾಧ್ಯತೆ ಹೆಚ್ಚಿದೆ. ಉಪಾಧ್ಯಕ್ಷ ಸ್ಥಾನ ಎಸ್ಸಿ ಮೀಸಲಾತಿ ಬಂದಿದ್ದು, ನಗರದ 6ನೇ ವಾರ್ಡ್‌ನ ಕವಿತಾಬೋರಯ್ಯ, 8ನೇ ವಾರ್ಡ್‌ನ ಸುಜಾತ ಪಾಲಯ್ಯ, 10ನೇ ವಾರ್ಡ್‌ನ ಸುಮಾಭರಮಣ್ಣ, 19ನೇ ವಾರ್ಡ್‌ನ ಕವಿತಾವೀರೇಶ್ ಸ್ಪರ್ಧೆಯಲ್ಲಿದ್ದಾರೆ. ಸುಮಾರು ಒಂದು ವರ್ಷದ ನಂತರ ನಗರಸಭೆ ನೂತನ ಅಧ್ಯಕ್ಷ, ಉಪಾಧ್ಯಕ್ಷ ಆಯ್ಕೆ ಒದಗಿ ಬಂದಿದ್ದು, ಮುಂದಿನ 2025ರಲ್ಲಿ ಮತ್ತೊಮ್ಮೆ ನಗರಸಭೆಗೆ ಚುನಾವಣೆ ನಡೆಯುವ ಸಂಭವವಿದೆ.

### ಮೈತ್ರಿ ಪಾದಯಾತ್ರೆ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

» ಮೊದಲ ಪುಟದಿಂದ

ಅದರ ನಿರ್ವಹಣೆ ಏನಿದ್ದರು ವ್ಯವಸ್ಥಾಪಕ ನಿರ್ದೇಶಕರಿಗೆ ಸೇರಿದ್ದು, ಹಾಗಾಗಿ ವಾಲ್ಮೀಕಿ ಹಗರಣದಲ್ಲಿ ಮುಖ್ಯಮಂತ್ರಿ ಭಾಗಿಯಾಗಿರಲು ಹೇಗೆ ಸಾಧ್ಯ ಎಂದು ಬಿಜೆಪಿ. ಜೆಡಿಎಸ್.ನವರನ್ನು ಪ್ರಶ್ನಿಸಿದರು? ಸಿದ್ದರಾಮಯ್ಯನವರಿಗೆರಾಜ್ಯಪಾಲರು ನೀಡಿರುವ ನೋಟಿಸ್ ಹಿಂದಕ್ಕೆ ಪಡೆಯಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಶೋಷಿತ ಸಮುದಾಯಗಳು ಒಂದಾಗಿ ರಾಜಭವನಕ್ಕೆ ಮುತ್ತಿಗೆ ಹಾಕುತ್ತೇವೆಂದು ಬೆದರಿಕೆ ಹಾಕಿದರು. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಚೇರ್ಮನ್ ಡಾ.ಕೆ. ಅನ್ವರ್‌ಭಾಷಾ ಮಾತನಾಡುತ್ತ ಎರಡನೆ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾಗಿ ನಿಷ್ಕಳಂಕವಾಗಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯನವರಿಗೆ ಕೇಂದ್ರ ಬಿಜೆಪಿ. ರಾಜ್ಯಪಾಲರ ಮೂಲಕ ನೋಟಿಸ್ ಕೊಡಿಸಿದೆ. ಹಿಂದಕ್ಕೆ ಪಡೆಯಬೇಕು. ಇಲ್ಲದಿದ್ದಲ್ಲಿ ರಾಜಭವನ ಚಲೋ ಚಳುವಳಿ ನಡೆಸಲಾಗುವುದೆಂದರು.ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಮಂಜಪ್ಪ ಮಾತನಾಡಿಮುಖ್ಯಮಂತ್ರಿಸಿದ್ದರಾಮಯ್ಯನವರನ್ನು ಅಧಿಕಾರದಿಂದ ಕೆಳಗಿಳಿಸಬೇಕೆಂದು ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಹೊರಟಿರುವ ಬಿಜೆಪಿ. ಮತ್ತು ಜೆಡಿ.ಎಸ್.ನವರು ರಾಜ್ಯಪಾಲರಿಂದ ನೋಟಿಸ್ ಕೊಡಿಸಿರುವುದನ್ನು ಹಿಂದಕ್ಕೆ ಪಡೆಯದಿದ್ದರೆ ರಾಜ ಭವನಕ್ಕೆ ಮುತ್ತಿಗೆ ಹಾಕಲಾಗುವುದೆಂದು ಎಚ್ಚರಿಸಿದರು.ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಜಿಲ್ಲಾಧ್ಯಕ್ಷ ಸಿ.ಟಿ.ಕೃಷ್ಣಮೂರ್ತಿ ಮಾತನಾಡಿ ವಿರೋಧ ಪಕ್ಷಗಳ ಪಿತೂರಿಗೆ ರಾಜ್ಯದ ಮುಖ್ಯಮಂತ್ರಿ ಹೆದರುವ ಅವಶ್ಯಕತೆಯಿಲ್ಲ. ಶೋಷಿತ ಸಮುದಾಯ ಹಾಗೂ ಹಿಂದುಳಿದ ಜಾತಿಗಳ ಒಕ್ಕೂಟ ಬೆನ್ನಿಗೆ ನಿಂತಿದೆ. ಅಧಿಕಾರದಿಂದ ಕೆಳಗಿಳಿಸಲು ಬಿಡುವುದಿಲ್ಲ ಎಂದು ಕಿಡಿಕಾರಿದರು.ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಉಪಾಧ್ಯಕ್ಷರುಗಳಾದ ಎಸ್.ಎನ್. ರವಿಕುಮಾರ್, ನಜ್ಮತಾಜ್, ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಅಲ್ಪಸಂಖ್ಯಾತ ವಿಭಾಗದ ಜಿಲ್ಲಾಧ್ಯಕ್ಷ ಸೈಯದ್ ಖುದ್ದೂಸ್, ಕೆಡಿಪಿ. ಸದಸ್ಯ ಕೆ.ಸಿ.ನಾಗರಾಜ್, ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂಆಲಿ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತನಂದಿನಿಗೌಡ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಶಿಕಲ ಸುರೇಶ್‌ಬಾಬು, ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಸೈಯದ್ ಮೊಹಿದ್ದೀನ್, ಸೇವಾದಳದ ಇಂದಿರಾ, ಪವಿತ್ರ, ಸುಧ, ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಆಶ್ರಯ ಕಮಿಟಿ ಸದಸ್ಯೆ ಮುನಿರಾ ಎ.ಮಕಾಂದಾರ್, ಶ್ರೀಮತಿ ಮೋಕ್ಷರುದ್ರಸ್ವಾಮಿ, ನಗರ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರೇಣುಕಶಿವು, ನಗರಸಭೆ ಸದಸ್ಯೆ ಪಿ.ಕೆ.ಮೀನಾಕ್ಷಿ, ನಗರಸಭೆ ಮಾಜಿ ಸದಸ್ಯ ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಶ್ರೀರಾಂ, ಮುದಸಿರ್ ನವಾಜ್, ಅಬ್ದುಲ್ಲಾ, ಗ್ಯಾರೆಂಟಿ ಅನುಷ್ಠಾ ಸಮಿತಿ ಅಧ್ಯಕ್ಷ ಆರ್.ಶಿವಣ್ಣ, ನ್ಯಾಯವಾದಿಗಳಾದ ಬೀಸ್ನಳ್ಳಿ ಜಯಣ್ಣ, ಸಿ.ಶಿವುಯಾದವ್, ಸುದರ್ಶನ್, ರವೀಂದ್ರ, ಮಹಮದ್ ರಫಿ, ಸೇರಿದಂತೆ ವಿವಿಧ ಮುಂಚೂಣಿ ಘಟಕಗಳ ಅಧ್ಯಕ್ಷರು ನೂರಾರು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

### ಆ.6 ರಿಂದ ಹತ್ತಿ ಮಾರಾಟ ನಿಲುಗಡೆ

» ಚಿತ್ರದುರ್ಗ

ಹತ್ತಿ ಖರೀದಿದಾರು ತಾವು ಖರೀದಿಸಿದ ಹತ್ತಿಯ ಪೇಮೆಂಟ್ ಸರಿಯಾದ ಸಮಯಕ್ಕೆ ನೀಡದೆ ಇರುವುದರಿಂದ, ಹತ್ತಿ ದಲ್ಲಾಲರು ರೈತರಿಗೆ ಪೇಮೆಂಟ್ ಮಾಡಲು ಕಷ್ಟವಾಗುತ್ತಿದೆ. ಈ ಹಿನ್ನಲೆಯಲ್ಲಿ ಆಗಸ್ಟ್ 6 ರಿಂದ ಚಿತ್ರದುರ್ಗ ನಗರದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ, ಹತ್ತಿ ಮಾರ್ಕೆಟ್ ನಡೆಸದಿರಲು ಮಾರುಕಟ್ಟೆ ದಲ್ಲಾಲರ ಸಂಘ ತೀರ್ಮಾನಿಸಿದೆ. ಆದ್ದರಿಂದ ರೈತರು ಆಗಸ್ಟ್ 6 ರಿಂದ ತಾವು ಬೆಳದ ಹತ್ತಿಯನ್ನು ಮಾರುಕಟ್ಟೆ ತರದಿರುವಂತೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಪದೋಷಗಳ ಬಗ್ಗೆ ನಿರ್ಭೀತಿಯಿಂದ ವರದಿ ಮಾಡಿ: ಶಾಸಕ ರಘುಮೂರ್ತಿ

» ಚಳ್ಳಕೆರೆ

ಆಡಳಿತ ಯಂತ್ರದ ಲೋಪದೋಷಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದಲ್ಲದೆ, ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರಿ ಸೌಲಭ್ಯ ದೊರೆಯುವಂತೆ ಮಾಡುವಲ್ಲಿ ಮಾಧ್ಯಮ ಇಂದು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿದೆ. ಜನಪರ ಕಾಳಜಿ ಹೊಂದಿರುವ ಪತ್ರಕರ್ತರಿಂದ ಮಾತ್ರ ಪತ್ರಿಕಾ ಕ್ಷೇತ್ರದ ಗೌರವ, ಮೌಲ್ಯ ಉಳಿಯಲು ಸಾಧ್ಯವೆಂದು ಕ್ಷೇತ್ರದ ಶಾಸಕ, ಸಣ್ಣ ಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಕರ್ನಾಟಕ ಮಾಧ್ಯಮ ಮಹಾಒಕ್ಕೂಟ ಚಳ್ಳಕೆರೆ ಶಾಖೆ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ, ಪೌರಕಾರ್ಮಿಕರ ಸನ್ಮಾನ, ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಪ್ರದೇಶದಿಂದ ನಗರದ ಪ್ರದೇಶದ ತನಕ ಮಾಧ್ಯಮಗಳ ವರದಿಯ ಬಗ್ಗೆ ಸಾರ್ವಜನಿಕರು ವಿಶ್ವಾಸವಿಟ್ಟು ನೋಡುತ್ತಾರೆ. ಮಾಧ್ಯಮಗಳನ್ನು ಎಷ್ಟು ಪ್ರೀತಿಸುತ್ತಾ




ಅಷ್ಟೇ ನಂಬಿಕೆಯಿಂದ ವರದಿಗಳ ಬಗ್ಗೆ ಉತ್ತಮ ಪ್ರತಿಕ್ರಿಯೆ ಹೊಂದಿದ್ದಾರೆ. ಆದರೆ, ಪತ್ರಿಕಾಮೌಲ್ಯ ಬದಿಗೊತ್ತಿ ಸ್ವಹಿತಕ್ಕಾಗಿ ಕಾರ್ಯನಿರ್ವಹಿಸುವ ಯಾರನ್ನೂ ಈ ಸಮಾಜ ನಂಬದು. ಕಳೆದ ಹಲವಾರು ವರ್ಷಗಳಿಂದ ಪತ್ರಕರ್ತರು ತಮ್ಮ ಮೂಲಭೂತ ಬೇಡಿಕೆಗಳ ಬಗ್ಗೆ ಮನವಿ ಸಲ್ಲಿಸುತ್ತಾ ಬಂದಿದ್ದೀರಿ, ಮುಂದಿನ ದಿನಗಳಲ್ಲಿ ಪತ್ರಕರ್ತರ ಎಲ್ಲಾ ಸಮಸ್ಯೆಗಳನ್ನು ನಿವಾರಿಸಲು ಪ್ರಾಮಾಣಿಕ ಪ್ರಯತ್ನ ನಡೆಸುವೆ ಎಂದರು.

ಮಹಾಒಕ್ಕೂಟದ ಜಿಲ್ಲಾಧ್ಯಕ್ಷ ಕರುನಾಡುಜಿಯಾವುಲ್ಲಾ ಪ್ರಾಸ್ತಾವಿಕವಾಗಿ ಮಾತನಾಡಿ, ಕರ್ನಾಟಕ ಮಾಧ್ಯಮ ಮಹಾಒಕ್ಕೂಟ ಕಳೆದ ಹಲವಾರು ವರ್ಷಗಳಿಂದ ಪತ್ರಕರ್ತರ ಸಮಸ್ಯೆ, ಬೇಡಿಕೆಗಳ ಬಗ್ಗೆ ಸರ್ಕಾರ ಮೇಲೆ ಒತ್ತಡ ಹೇರಲು ಪ್ರಾಮಾಣಿಕ ಪ್ರಯತ್ನ ನಡೆಸುತ್ತಾ ಬಂದಿದೆ. ಇಂದು ಪತ್ರಿಕಾ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಲು ಸಾಕಷ್ಟು ಅಡೆತಡೆಗಳಿವೆ. ಸ್ಥಳೀಯ ಪತ್ರಿಕೆಗಳು ಸೇರಿದಂತೆ ರಾಜ್ಯಮಟ್ಟದ ಪತ್ರಿಕೆಗಳು ಆರ್ಥಿಕ ದುಸ್ಥಿತಿಯಿಂದ ನರಳುತ್ತಿವೆ. ಪತ್ರಿಕಾಕ್ಷೇತ್ರ ಬಲವಾಗಿದ್ದರೆ ಮಾತ್ರ ಜನರ ಸೇವೆ ಮಾಡಲು ಸಾಧ್ಯವೆಂದರು.

ದಲಿತ ಸಂಘರ್ಷ ಸಮಿತಿಯ ಹೋರಾಟಗಾರ ಟಿ.ವಿಜಯಕುಮಾರ್ ಮಾತನಾಡಿ, ಸಮಾಜದ ಹಿತವನ್ನು ಸಂರಕ್ಷಣೆ ಮಾಡುವಲ್ಲಿ ಮಾಧ್ಯಮ ಕ್ಷೇತ್ರ ಎಂದೂ ಹಿಂದೆಬಿದ್ದಿಲ್ಲ. ಜನರ ಸೇವೆಗಾಗಿ ತಮ್ಮ ಎಲ್ಲಾ ಸಮಸ್ಯೆಗಳನ್ನು ಬದಿಗೊತ್ತಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಯಾವುದೇ ಮೂಲಸೌಲಭ್ಯವಿಲ್ಲದೆ ಪತ್ರಕರ್ತರು ಶ್ರಮವಹಿಸಿ ದುಡಿಯುತ್ತಿದ್ದಾರೆ. ಆದರೆ, ಸರ್ಕಾರ ಮಾತ್ರ ಇವರ ನೆರವಿಗೆ ಬಾರದೆ ಇರುವುದು ನೋವಿನ ಸಂಗತಿ ಎಂದರು.

ಹಿರಿಯ ಸಾಹಿತಿ, ಪತ್ರಕರ್ತ ಬಿ.ತಿಪ್ಪಣ್ಣಮರಿಕುಂಟೆ ಮಾತನಾಡಿ, ಪತ್ರಿಕಾ ಕ್ಷೇತ್ರದಲ್ಲಿ ಎಂದೂ ಯಾರೂ ಮರೆಯದಂತಹ ಡಿ.ವಿ.ಗುಂಡಪ್ಪನವರ ಆದರ್ಶಗಳನ್ನು ಪತ್ರಕರ್ತರ ಪಾಲಿಸಬೇಕಿದೆ. ಶತಮಾನಗಳು ಕಳೆದರೂ ಸಹ ಗುಂಡಪ್ಪನವರ ಆದರ್ಶಗಳನ್ನು ಅಳವಡಿಸಿಕೊಳ್ಳುವಲ್ಲಿ ವಿಫಲತೆ ಎದ್ದು ಕಾಣುತ್ತಿದೆ. ಇದು ಮುಂದಿನ ದಿನಗಳಲ್ಲಿ ಈ ಕ್ಷೇತ್ರಕ್ಕೆ ಸಾಕಷ್ಟು ಹೊಡೆತವನ್ನು ನೀಡಲಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲ್ಲೂಕು ಅಧ್ಯಕ್ಷ ಪಿ.ಗಂಗಾಧರ ವಹಿಸಿದ್ದರು. ರಾಜ್ಯಾಧ್ಯಕ್ಷ ಕೆ.ಶಿವಕುಮಾರ್, ರಾಜ್ಯಪ್ರಧಾನ ಕಾರ್ಯದರ್ಶಿ ಡಿ.ಈಶ್ವರಪ್ಪ, ಕಥೆಗಾರ ಮೊದೂರುತೇಜ, ಡಾ.ಚಂದ್ರನಾಯ್ಕ, ನಗರಸಭೆ ಸದಸ್ಯೆ ಕವಿತಾಬೋರಯ್ಯ, ನಾಮನಿರ್ದೇಶಕ ಸದಸ್ಯರಾದ ನೇತಾಜಿಪ್ರಸನ್ನ, ಭದ್ರಿ, ಮುಖಂಡರಾದ ಎಚ್.ತಿಪ್ಪೇಸ್ವಾಮಿ, ಬಹೀರ್‌ಹಯಾತ್, ಎಸ್.ಬಿ.ತಿಪ್ಪೇಸ್ವಾಮಿ, ಮಾರಪ್ಪ, ಮೌನೇಶ್‌ಚಾರ್, ರೇವಣಸಿದ್ದಪ್ಪ, ಪ್ರೇಮಕ್ಕ, ಗಾಯಿತ್ರಿ, ನಿರ್ಮಲ, ಮಂಜುನಾಥ, ವೆಂಕಟಚಲಯ್ಯ ಉಪಸ್ಥಿತರಿದ್ದರು.

## "ಶ್ರದ್ಧಾಭಕ್ತಿಯ ವೈಭವದ ಶನೇಶ್ವರ ಸ್ವಾಮಿ ಮೆರವಣಿಗೆ "

» ಹೊಸದುರ್ಗ

ನಗರದ ಎಪಿಎಂಸಿ ಮಾರುಕಟ್ಟೆ ಬಳಿಯ ಹುಳಿಯಾರು ರಸ್ತೆಯಲ್ಲಿನ ನೂತನವಾಗಿ ಲೋಕಾರ್ಪಣಗೆ ಸಿದ್ದಗೊಂಡಿರುವ ಶನೇಶ್ವರ ಸ್ವಾಮಿ ದೇವಾಲಯದ ಪ್ರಾರಂಭೋತ್ಸವದ ಅಂಗವಾಗಿ ಸೋಮವಾರ ಪಟ್ಟಣದಲ್ಲಿ ದೇವರುಗಳ ಮೆರವಣಿಗೆ ಅತ್ಯಂತ ವಿಜೃಂಭಣೆಯಿಂದ ಸಾಗಿತು.

ನಗರದ ಗ್ರಾಮದೇವತೆ ದುರ್ಗಾಂಬಿಕಾದೇವಿ, ಬನಶಂಕರಿ ದೇವಿ, ಪ್ಲೇಗದಮ್ಮದೇವಿ, ಅಂತರಘಟ್ಟಮ್ಮದೇವಿ, ಕಾಳಮ್ಮ, ಗೊರವಿನಕಲ್ಲು ಕಂಬದ ನರಸಿಂಹಸ್ವಾಮಿ, ಹೊಸದುರ್ಗದ ರಾಮದೇವರು, ಕುರುಬರಹಳ್ಳಿ ಕರಿಯಮ್ಮ, ಬುಕ್ಕಸಾಗರ ಆಂಜನೇಯ ಸ್ವಾಮಿ, ಹಟ್ಟಿ ದುರ್ಗಾಂಭ ದೇವಿ, ಪಟ್ಟಣದ ವೀರಭದ್ರೇಶ್ವರ ಸ್ವಾಮಿ, ಕುಕ್ಕುವಾಡೇಶ್ವರಿದೇವಿ, ಕಾಳಮ್ಮ, ಕರುಮಾರಿಮ್ಮದೇವಿ ಹಾಗೂ ಪುರದ ಲಕ್ಷ್ಮೀ ರಂಗನಾಥಸ್ವಾಮಿ ದೇವರು ಮೆರವಣಿಗೆ ಪಟ್ಟಣದಲ್ಲಿಸಾಗಿತು.ಭವ್ಯವಾದಅಲಂಕೃತಗೊಂಡ ಇಷ್ಟೊಂದು ದೇವರುಗಳ ಮೆರವಣಿಗೆ ನೋಡುಗರ ಕಣ್ಮನ ಸೆಳೆಯುವಂತಿತ್ತು. ಪಟ್ಟಣದ ಅಧಿದೇವತೆ ದುರ್ಗಾಂಬಿಕಾ ದೇವಿ ಸನ್ನಿಧಿಯಲ್ಲಿ ಪೂಜೆ ಮಾಡಿಸಿ, ಆರಂಭವಾದ ಮೆರವಣಿಗೆ



ಬಸವೇಶ್ವರ ವೃತ್ತ, ಹುಳಿಯಾರು ವೃತ್ತದ ಮೂಲಕ ವೀರಭದ್ರೇಶ್ವರ ಹಾಗೂ ಸಾಯಿ ಮಂದಿರದ ಮಾರ್ಗವಾಗಿ ಶನೇಶ್ವರ ಸ್ವಾಮಿ ದೇವಾಲಯ ತಲುಪಿತು. , ನಾದಸ್ವರ, ಚಂಡೇವಾದ್ಯ ಚಿಟ್ಟಿಮೇಳ, ವೀರಗಾಸೆ, ನಾಸಿಕ್ ಡೊಳ್ಳು ಹಾಗೂ ವಿವಿಧ ಕಲಾತಂಡಗಳು ಮೆರವಣಿಗೆಗೆ ಮತ್ತಷ್ಟು ಮೆರಗು ನೀಡಿದವು. ಮಹಿಳೆಯರು ವೀರಗಾಸೆ, ತೊಗಲು ಗೊಂಬೆಗಳು ಸಾರ್ವಜನಿಕರನ್ನು ಸೆಳೆಯುತ್ತಿದ್ದವು. ಪಟ್ಟಣದ ಪ್ರಮುಖ ಬೀದಿಗಳಲ್ಲಿ ದೇವರುಗಳ ಮೆರವಣಿಗೆ ಹಬ್ಬದ ವಾತಾವರಣ ನೆಲೆಸುವಂತೆ ಮಾಡಿತು.ಮೆರವಣಿಗೆಯಲ್ಲಿ ಶಾಸಕ ಬಿ.ಜಿ. ಗೋವಿಂದಪ್ಪ, ಕಾಂಗ್ರೆಸ್ ನಗರ ಘಟಕದ ಅಧ್ಯಕ್ಷ ಆಗ್ರೋ ಶಿವಣ್ಣ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ದೀಪಿಕಾ ಸತೀಶ್, ಗುರು ಶನೇಶ್ವರ ಸ್ವಾಮಿ ಭಕ್ತ ಮಂಡಳಿ ಅಧ್ಯಕ್ಷ ಸಿ. ಪ್ರಕಾಶ್, ಕಾರ್ಯದರ್ಶಿ ರಾಜಣ್ಣ ಸೇರಿದಂತೆ ಭಕ್ತ ಮಂಡಳಿ ಸದಸ್ಯರು, ರಾಜಕೀಯ ಮುಖಂಡರು ಹಾಗೂ ನೂರಾರು ಭಕ್ತಾದಿಗಳಿದ್ದರು.

## ಹೊಳಲ್ಕೆರೆ: ವಿಶ್ವ ಸ್ತನ್ಯಪಾನ ಸಪ್ತಾಹ



**ಚಿತ್ರದುರ್ಗ:** ಹೊಳಲ್ಕೆರೆ ಪಟ್ಟಣದ ನಗರದ ಆರೋಗ್ಯ ಮತ್ತು ಕ್ಷೇಮ ಕೇಂದ್ರ ನಮ್ಮ ಕ್ಲಿನಿಕ್‌ನಲ್ಲಿ ಶನಿವಾರ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ನಡೆಯಿತು. ಕೊರತೆಗಳನ್ನು ಕೊನೆಗೊಳಿಸಿ ಸರ್ವರಿಗೂ ಸ್ತನ್ಯಪಾನದ ಬೆಂಬಲ ನೀಡಿ ಎಂಬ ಘೋಷವಾಕ್ಯದೊಂದಿಗೆ ಎದೆಹಾಲಿನ ಮಹತ್ವದ ಕುರಿತು ಹೊಳಲ್ಕೆರೆ ತಾಲ್ಲೂಕು ಆರೋಗ್ಯಾಧಿಕಾರಿ ರೇಖಾ ಮಾಹಿತಿ ನೀಡಿದರು. ನಮ್ಮ ಕ್ಲಿನಿಕ್ ವೈದ್ಯಾಧಿಕಾರಿ ಸೈಯದ್ ಬಿಲಾಲ್, ಗುಂಡೇರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಕಾವ್ಯ ಅವರು ಎದೆಹಾಲಿನ ಉಪಯೋಗಗಳ ಬಗ್ಗೆ ಸಂಕ್ಷಿಪ್ತವಾಗಿ ವಿವರಿಸಿದರು. ಕಾರ್ಯಕ್ರಮದಲ್ಲಿ ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಅಶೋಕ್ ಹಾಗೂ ಆರ್‌ಬಿಎಸ್‌ಕೆ ತಂಡದ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತರು ಇದ್ದರು.

## ತಾಲ್ಲೂಕಿನಲ್ಲಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಅಧ್ಯಕ್ಷರಾಗಿ ಕೆ.ಪ್ರಕಾಶ್ ಆಯ್ಕೆ

» ಚಳ್ಳಕೆರೆ

ತಾಲ್ಲೂಕಿನಲ್ಲಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತನ್ನ ಶೈಕ್ಷಣಿಕ ಚಟುವಟಿಕೆಗಳನ್ನು ಕ್ರಿಯಾಶೀಲವಾಗಿ ನಡೆಸುವ ದೃಷ್ಠಿಯಿಂದ ಅಧ್ಯಕ್ಷ, ಪ್ರಧಾನ ಕಾರ್ಯದರ್ಶಿ ಹಾಗೂ ನಿರ್ದೇಶಕರನ್ನು ಅವಿರೋಧವಾಗಿ ಆಯ್ಕೆ ಮಾಡಿಕೊಳ್ಳಲಾಗಿದೆ ಎಂದು ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಜಿಲ್ಲಾಧ್ಯಕ್ಷ ಬಿ.ಸುರೇಶ್ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ತಾಲ್ಲೂಕಿನ ಪ್ರಾಥಮಿಕ ಶಾಲಾ ಪದವೀಧರ ಶಿಕ್ಷಕರ ಸಂಘ ತನ್ನ ಚಟುವಟಿಕೆಯನ್ನು ವಿಸ್ತರಿಸುವ ದೃಷ್ಠಿಯಿಂದ ಇತ್ತೀಚೆಗೆ ನೂತನ ಆಯ್ಕೆ ಸಮಿತಿಯನ್ನು ರಚಿಸಲಾಯಿತು.




ಅಧ್ಯಕ್ಷರಾಗಿ ಭರಮಸಾಗರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪದವೀಧರ ಮುಖ್ಯ ಶಿಕ್ಷಕ ಕೆ.ಪ್ರಕಾಶ್, ಕೆಂಚವೀರನಹಳ್ಳಿ ಶಾಲೆಯ ಪದವೀಧರ ಮುಖ್ಯ ಶಿಕ್ಷಕ ಆರ್.ಬಸವರಾಜರವರನ್ನು ಪ್ರಧಾನ ಕಾರ್ಯದರ್ಶಿಯನ್ನಾಗಿ ಆಯ್ಕೆ ಮಾಡಲಾಯಿತು. ಉಳಿದಂತೆ ಸಂಘದ ನಿರ್ದೇಶಕರ ಆಯ್ಕೆಯೂ ಸಹ ಸುಲಲಿತವಾಗಿ ನಡೆಯಿತು.

ನೂತನ ಅಧ್ಯಕ್ಷ ಕೆ.ಪ್ರಕಾಶ್ ಮಾತನಾಡಿ, ಪದವೀಧರರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳನ್ನು ನೇಮಿಸುವ ಮೂಲಕ ಅವರಿಗೆ ಜವಾಬ್ದಾರಿಯನ್ನು ನೀಡಲಾಗಿದೆ. ತಾಲ್ಲೂಕಿನ ಪದವೀಧರ ಮುಖ್ಯ ಶಿಕ್ಷಕರ ಸಮಸ್ಯೆಗಳ ಬಗ್ಗೆ ನಿರಂತರ ಹೋರಾಟ ನಡೆಸಲಾಗುವುದು. ಪ್ರತಿಯೊಂದು ಹಂತದಲ್ಲೂ ಸಂಘಟನೆಯ ಎಲ್ಲಾ ಸದಸ್ಯರನ್ನು ಗಣನೆಗೆ ತೆಗೆದುಕೊಂಡು ಕಾರ್ಯನಿರ್ವಹಿಸಲಾಗುವುದು. ವಿಶೇಷವಾಗಿ ಶಿಕ್ಷಕರ ಸಂಘದ ಎಲ್ಲಾ ಪದಾಧಿಕಾರಿಗಳು ಸೇರಿ ಅವಿರೋಧವಾಗಿ ಆಯ್ಕೆ ಮಾಡಿದ್ದಕ್ಕೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಅನುದಾನಿತ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಪಿ.ಮಹಂತಣ್ಣ, ಎನ್‌ಪಿಎಸ್ ಅಧ್ಯಕ್ಷ ಎಚ್.ಒ.ರಾಜಣ್ಣ, ಶಿಕ್ಷಕರಾದ ಮಂಜುನಾಥ,ಗುರುಸ್ವಾಮಿ,ಡಿ.ತಿಪ್ಪೇಸ್ವಾಮಿ, ರಫೀಕ್‌ಭಾಷ, ತಿಪ್ಪೇಸ್ವಾಮಿ, ವೀರೇಂದ್ರ, ಹರೀಶ್‌ನಾಯ್ಕ, ಶಶಿಧರ, ವಿಜಯನಾಯ್ಕ, ಕುಮಾರ್, ಪುಟ್ಟಸ್ವಾಮಿ,ಅನಿಲ್‌ಕುಮಾರ್ ಮುಂತಾದವರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**


# ಜೇಷ್ಠತೆ ಆಧಾರದ ಮೇಲೆ ಬಡ್ತಿ ನೀಡಿ: ಶಿಕ್ಷಕರ ಸಂಘ ಆಗ್ರಹ

» ಚಳ್ಳಕೆರೆ

ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಅಧ್ಯಕ್ಷ ಮಹಲಿಂಗಪ್ಪನವರ ನೇತೃತ್ವದಲ್ಲಿ ಶಿಕ್ಷಕರ ಬಹುದಿನಗಳ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ತಹಶೀಲ್ದಾರ್ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ನೀಡಿದರು.

ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿದ ಅಧ್ಯಕ್ಷ ಮಹಲಿಂಗಪ್ಪ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಸುಮಾರು 1,88,532 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. 2016ರಲ್ಲಿದ್ದ ಆರ್ಹತೆಯ ಆಧಾರದ ಮೇಲೆ ಪ್ರೌಢಶಾಲಾ ಶಿಕ್ಷಕರಾಗಿ ಬಡ್ತಿ ನೀಡಬೇಕು, ಮುಖ್ಯಗುರು ಹಾಗೂ ಹಿರಿಯಮುಖ್ಯಗುರು ಜೇಷ್ಠತೆ ಆಧಾರದ ಮೇಲೆ ಬಡ್ತಿ ನೀಡಬೇಕು ಸೇರಿದಂತೆ ಹಲವಾರು ಬೇಡಿಕೆಗಳ ಬಗ್ಗೆ ಮನವಿ ಸಲ್ಲಿಸಲಾಯಿತು. ತಾಲ್ಲೂಕಿನಾದ್ಯಂತ ಸುಮಾರು 600ಕ್ಕೂ ಹೆಚ್ಚು ಶಿಕ್ಷಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.



**ಚಳ್ಳಕೆರೆ ನಗರದ ತಾಲ್ಲೂಕು ಕಚೇರಿಯಲ್ಲಿ ಸೋಮವಾರ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದಿಂದ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ತಹಶೀಲ್ದಾರ್‌ಗೆ ಮನವಿ ಅರ್ಪಿಸಿದರು.**

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಬೇಡಿಕೆಗಳನ್ನು ಈಡೇರಿಸುವ ಕುರಿತು ತಾವು ಮುಖ್ಯ ಮಂತ್ರಿಗೆನೀಡಿದಮನವಿಯನ್ನುಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್‌ಸುರೇಶ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಎಲ್ಲಾ ಬೇಡಿಕೆಗಳು ನ್ಯೆಜ್ಯವಾಗಿವೆ. ಸರ್ಕಾರ ಇವರ ಬೇಡಿಕೆಗಳ ಬಗ್ಗೆ ಪರಿಶೀಲನೆ ನಡೆಸಿ ಯಾವುದೇ ಅನ್ಯಾಯವಾಗದಂತೆ ನ್ಯಾಯ ಒದಗಿಸಬೇಕು ಎಂದರು.

## ಫಾಸ್ಟ್ ನ್ಯೂಸ್

### ಹೊಳಲ್ಕೆರೆ: ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ನಿವೃತ್ತಿ, ಇತರೆ ಕಾರಣಗಳಿಂದ ತೆರವಾಗಿರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 30 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹೊಳಲ್ಕೆರೆ ತಾಲ್ಲೂಕಿನಾದ್ಯಂತ 9 ಅಂಗನವಾಡಿ ಕಾರ್ಯಕರ್ತೆ, 1 ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು 14 ಅಂಗನವಾಡಿ ಸಹಾಯಕಿರ ಹುದ್ದೆಗಳಿಗೆ ಅರ್ಹ ಸ್ಥಳೀಯ ಮಹಿಳಾ ಅಭ್ಯರ್ಥಿಗಳು ಇಲಾಖೆಯ ವೆಬ್ಸೈಟ್ www.anganwadirecuruit.kar.nic.in ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಕನಿಷ್ಠ 19 ರಿಂದ 35 ವರ್ಷ ವಯೋಮಿತಿಯೊಳಗಿರಬೇಕು.

**ಅಂಗನವಾಡಿ ಕಾರ್ಯಕರ್ತೆ ಮೀಸಲಾತಿ ವಿವರ:** ತಾಳಿಕಟ್ಟೆ ಗ್ರಾ.ಪಂ.ನ ತಾಳಿಕಟ್ಟೆ–ಎಫ್, ತುಪ್ಪದಹಳ್ಳಿ ಗ್ರಾ.ಪಂ.ನ ಸಿಂಗೇನಹಳ್ಳಿ, ಅರೇಹಳ್ಳಿ ಗ್ರಾ.ಪಂ.ನ ಜೈಪುರ, ಮುತ್ತುಗದೂರು ಗ್ರಾ.ಪಂ.ನ ಕಾಗಳಗೆರೆ ಗೊಲ್ಲರಹಟ್ಟಿ, ಅಂದನೂರು ಗ್ರಾ.ಪಂ.ನ ಅಂದನೂರು–ಬಿ, ಶಿವಗಂಗಾ ಗ್ರಾ.ಪಂ.ನ ಶಿವಗಂಗಾ–ಎ, ಗುಂಜಿಗೂರು ಗ್ರಾ.ಪಂ.ನ ಎಸ್.ಹೆಚ್.ಹಳ್ಳಿ ಅಂಗನವಾಡಿ ಕೇಂದ್ರಗಳ ಅಂಗನವಾಡಿ ಕಾರ್ಯಕರ್ತೆ ಹುದ್ದೆ ಇತರೆ ವರ್ಗಕ್ಕೆ ಹಾಗೂ ಚಿಕ್ಕೆಮ್ಮಿಗನೂರು ಗ್ರಾ.ಪಂ.ನ ಕೊಡಗವಳ್ಳಿ ಹಟ್ಟಿ ಪರಿಶಿಷ್ಟ ಪಂಗಡಕ್ಕೆ ಹಾಗೂ ಗುಂಡೇರಿ ಗ್ರಾ.ಪಂ.ನ ಗುಂಡೇರಿ ಕಾವಲ್ ಅಂಗನವಾಡಿ ಕೇಂದ್ರ ಪರಿಶಿಷ್ಟ ಜಾತಿಗೆ ಮತ್ತು ಅಂದನೂರು ಗ್ರಾ.ಪಂ. ನ ಇಂಗಳದಹಳ್ಳಿ ಮಿನಿ ಅಂಗನವಾಡಿ ಕಾರ್ಯಕರ್ತೆ ಹುದ್ದೆ ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿದೆ.

**ಅಂಗನವಾಡಿ ಸಹಾಯಕಿಯರ ಮೀಸಲಾತಿ ವಿವರ:** ಗುಂಡೇರಿ ಗ್ರಾ.ಪಂ.ನ ಮಾಳೇನಹಳ್ಳಿ, ಆರ್.ನುಲೇನೂರ್ ಗ್ರಾ.ಪಂ.ನ ಬಸಾಪುರ, ಅರೇಹಳ್ಳಿ ಗ್ರಾ.ಪಂ.ನ ಅರೇಹಳ್ಳಿ ಆರ್.ಎಸ್, ಶಿವಪುರ ಗ್ರಾ.ಪಂ.ನ ಅಗ್ರಹಾರ, ರಾಮಗಿರಿ ಗ್ರಾ.ಪಂ.ನ ರಾಮಗಿರಿ–ಎ ಹಾಗೂ ದಾಸೀಕಟ್ಟೆ, ಗಂಗಸಮುದ್ರ ಗ್ರಾ.ಪಂ.ನ ತಾಳಕಟ್ಟ–ಎ, ಬಿದರಕೆರೆ ಗ್ರಾ.ಪಂ.ನ ಬಿದರಕೆರೆ, ಉಪ್ಪರಿಗೇನಹಳ್ಳಿ ಗ್ರಾ.ಪಂ.ನ ಗೊಲ್ಲರಹಟ್ಟಿ ಅಂಗನವಾಡಿ ಕೇಂದ್ರ ಅಂಗನವಾಡಿ ಸಹಾಯಕಿಯರ ಹುದ್ದೆ ಇತರೆ ವರ್ಗಕ್ಕೆ ಮೀಸಲಿವೆ. ಉಳಿದಂತೆ ತಾಳ್ಯ ಗ್ರಾ.ಪಂ.ನ ವೆಂಕಟೇಶಪುರ,ಅಂದನೂರು ಗ್ರಾ.ಪಂ.ನ ಗಂಜಿಗಟ್ಟೆ ಲಂಬಾಣಿಹಟ್ಟಿ, ಚಿತ್ರಹಳ್ಳಿ ಗ್ರಾ.ಪಂ.ನ ಚಿತ್ರಹಳ್ಳಿ ಗೇಟ್ ಮತ್ತು ಹೊಳಲ್ಕೆರೆ ನಗರದ ವಾರ್ಡ ನಂ–16 ರ ಎ.ಕೆ. ಕಾಲೋನಿ ಅಂಗನವಾಡಿ ಕೇಂದ್ರದ ಪರಿಶಿಷ್ಟ ಜಾತಿಗೆ ಹಾಗೂ ರಾಮಗಿರಿ ಗ್ರಾ.ಪಂ.ನ ರಾಮಗಿರಿ–ಸಿ ಅಂಗನವಾಡಿ ಕೇಂದ್ರ ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹೊಳಲ್ಕೆರೆ ನಗರದ ಎನ್.ಹೆಚ್.–13 ರಸ್ತೆಯ ಹರಿಕೃಪ ಬಿಲ್ಡಿಂಗ್ ನಲ್ಲಿರುವ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹದು ಎಂದು ಪ್ರಕಟಣೆ ತಿಳಿಸಿದೆ.

### ಚಿತ್ರದುರ್ಗ: ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಶಿಶು ಅಭಿವೃದ್ಧಿ ಯೋಜನೆಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 30 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆಯು ಪ್ರಾರಂಭವಾಗಿದ್ದು, ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಆಸಕ್ತ ಅರ್ಹ ಅಭ್ಯರ್ಥಿಗಳು ಇಲಾಖೆ ವೆಬ್ಸೈಟ್ https://karnemakaone.kar.nic.in/abcd/ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬಹುದು. ಅಂಗನವಾಡಿ ಕಾರ್ಯಕರ್ತೆ ಹುದ್ದೆ ಮೀಸಲಾತಿ ವಿವರ: ಜೆ.ಎನ್.ಕೋಟೆ ಗ್ರಾ.ಪಂ.ನ ಜೆ.ಎನ್.ಕೋಟೆ–ಬಿ ಹಾಗೂ ಜೆ.ಸಿ.ಹಳ್ಳಿ ಗೊಲ್ಲರಹಟ್ಟಿ ಅಂಗನವಾಡಿ ಕೇಂದ್ರ ಎಸ್.ಟಿ ವರ್ಗಕ್ಕೆ ಮತ್ತು ಇಂಗಳದಾಳ್ ಗ್ರಾ.ಪಂ.ನ ಎರೇಹಳ್ಳಿ ಅಂಗನವಾಡಿ ಕೇಂದ್ರ ಎಸ್.ಸಿ ಗೆ ವರ್ಗಕ್ಕೆ ಮೀಸಲಿವೆ.

**ಅಂಗನವಾಡಿ ಸಹಾಯಕಿಯರ ಮೀಸಲಾತಿ ವಿವರ:** ಚಿತ್ರದುರ್ಗ ನಗರದ ವಾರ್ಡ್ ಸಂಖ್ಯೆ –27 ರ ಕೆ.ಎಸ್.ಎಫ್.ಸಿ ಹತ್ತಿರದ ಅಂಗನವಾಡಿ ಕೇಂದ್ರ, ವಾರ್ಡ್ ಸಂಖ್ಯೆ– 01 ರ ಸಣ್ಣದುಮ್ಮಿ, ವಾರ್ಡ್ ಸಂಖ್ಯೆ–29 ರ ಬಸಪ್ಪ ಆಸ್ಪತ್ರೆ ಅಂಗನವಾಡಿ ಕೇಂದ್ರ, ವಾರ್ಡ್ ಸಂಖ್ಯೆ–12 ರ ಫಾತಿಮಾ ಮಸೀದಿ ಅಂಗನವಾಡಿ ಕೇಂದ್ರ, ವಾರ್ಡ್ ಸಂಖ್ಯೆ–13 ರ ನೆಹರು ನಗರ ಅಂಗನವಾಡಿ ಕೇಂದ್ರ–ಬಿ ಮತ್ತು ಡಿ ಕೇಂದ್ರ, ವಾರ್ಡ್ ಸಂಖ್ಯೆ–11 ರ ಚೇಳಗುಡ್ಡ–ಎ, ಜಾನುಕೊಂಡ ಗ್ರಾ.ಪಂ.ನ ಗಂಜಿಗಟ್ಟೆ, ಸಿದ್ದಾಪುರ ಗ್ರಾ.ಪಂ.ನ ಮಾನಂಗಿ, ಅನ್ನೇಹಾಳ್ ಗ್ರಾ.ಪಂ.ನ ಅನ್ನೇಹಾಳ್ ಗೊಲ್ಲರಹಟ್ಟಿ, ಎಂ.ಕೆ.ಹಟ್ಟಿ ಗ್ರಾ.ಪಂ.ನ ಎಂ.ಆರ್.ನಗರದ – ಎ ಅಂಗನವಾಡಿ ಕೇಂದ್ರ ಇತರೆ ವರ್ಗಕ್ಕೆ ಮತ್ತು ಮದಕರಿಪುರ ಗ್ರಾ.ಪಂ.ನ ಮದಕರಿಪುರ–ಎ ಅಂಗನವಾಡಿ ಕೇಂದ್ರ ಎಸ್.ಸಿ ಗೆ ಮೀಸಲಿವೆ. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾ ಕ್ರೀಡಾಂಗಣ ಹತ್ತಿರದ, ಜಿಲ್ಲಾ ಭಾಲಭವನ ಆವರಣದಲ್ಲಿರುವ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹದು ಎಂದು ಪ್ರಕಟಣೆ ತಿಳಿಸಿದೆ.

**ತಳಕು ಮತ್ತು ಪರುಶುರಾಂಪುರ ಹೋಬಳಿಯಲ್ಲಿ ರೈತರಿಗೆ ಬಿಜೋಪಚಾರ ಮತ್ತು ಸುರಕ್ಷಿತ ಪೀಡೆನಾಶಕ ಬಳಕೆ ಕುರಿತು ಆಂದೋಲನಾ ಕಾರ್ಯಕ್ರಮ**

# ಗುಣಮಟ್ಟದ ಬಿತ್ತನೆ ಬೀಜ ಬಳಸಲು ಸಲಹೆ

» **ಚಿತ್ರದುರ್ಗ**



ಕೃಷಿಯಲ್ಲಿ ಗುಣಮಟ್ಟದ ಬಿತ್ತನೆ ಬೀಜದ ಮಹತ್ವವಾಗಿದ್ದು, ಗುಣಮಟ್ಟದ ಬಿತ್ತನೆ ಬೀಜ ಬಳಸಬೇಕು ಎಂದು ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕರು ಹಾಗೂ ಮುಖ್ಯಸ್ಥರಾದ ಆರ್.ರಜನೀಕಾಂತ ರೈತರಿಗೆ ಸಲಹೆ ನೀಡಿದರು.

ಚಳ್ಳಕೆರೆ ತಾಲ್ಲೂಕಿನ ತಳಕು ಮತ್ತು ಪರುಶುರಾಂಪುರ ಹೋಬಳಿಯ ನಾಗಗೊಂಡನಹಳ್ಳಿ ಗ್ರಾಮದಲ್ಲಿ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ರೈತರಿಗೆ ಬಿಜೋಪಚಾರ ಮತ್ತು ಸುರಕ್ಷಿತ ಪೀಡೆನಾಶಕ ಬಳಕೆ ಕುರಿತು ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶೇಂಗಾದ ಪ್ರಾರಂಭದ ಹಂತದಲ್ಲಿ ಬರುವ ಕೀಟ ಮತ್ತು ರೋಗಗಳ ನಿರ್ವಹಣೆಗೆ ಬೀಜೋಪಚಾರ ಅತ್ಯವಶ್ಯಕ ಎಂದು ಹೇಳಿದರು.

ಶೇಂಗಾ ಬೆಳೆಯಲ್ಲಿ ಬೇರು ಹುಳ, ಗೆದ್ದಲು ಭಾದೆ ನಿರ್ವಹಿಸಲು ಬಿತ್ತನೆಗೆ ಮೊದಲು ಕ್ಲೋರೋಪೈರಿಫಾಸ್ 15 ಮಿಲೀ/ಪ್ರತಿಕೆಜಿ ಬೀಜಕ್ಕೆ ಲೇಪಿಸಿ ಬಿತ್ತನೆ ಮಾಡಬಹುದು. ಶೇಂಗಾ ಬೆಳೆಯಲ್ಲಿ ಕತ್ತು ಕೊಳೆ ರೋಗದ ನಿರ್ವಹಣೆಗೆ ಕಾರ್ಬನ್ಡೈಜಿಮ್ @ 2 ಗ್ರಾಂ/ಕೆಜಿ ಬೀಜಕ್ಕೆ ಅಥವಾ ಟ್ರೈಕೋಡರ್ಮಾ @ 4–10 ಗ್ರಾಂ/ಪ್ರತಿಕೆಜಿ ಬೀಜಕ್ಕೆ ಹಾಕಿ ಬೀಜೋಪಚಾರ ಮಾಡಬೇಕು ಎಂದು ಹೇಳಿದರು.

ಸೂಕ್ಷ್ಮಾಣು ಜೀವಿಗಳನ್ನು ಬಳಸಿ ಬೆಳೆಗಳಲ್ಲಿ ಇಳುವರಿ ಹೆಚ್ಚಿಸಲು ಸಾರಜನಕ ಸ್ಥಿರೀಕರಿಸುವ ಜೀವಾಣುಗಳಾದ ಅಜೋಸ್ಪಿರಿಲಂ, ಅಜೊಟೊಬ್ಯಾಕ್ಟರ್‌ರನ್ನು ಏಕದಳ ಧಾನ್ಯಗಳಾದ ಭತ್ತ, ರಾಗಿ, ಗೋಧಿ, ಮುಸುಕಿನ ಜೋಳ ಹಾಗೂ ರೈಜೋಬಿಯಂವನ್ನು ಬೇಳೆಕಾಳು ಬೆಳೆಗಳಾದ ತೊಗರಿ, ಅಲಸಂದೆ, ಕಡಲೆ ಮುಂತಾದ ಬೆಳೆಗಳಲ್ಲಿ ಬೀಜೋಪಚಾರಕ್ಕೆ ಬಳಸಬಹುದು. ರಂಜಕ ಕರಗಿಸುವ ಜೀವಾಣುಗಳು ಎಲ್ಲಾ ಬೆಳೆಗಳಿಗೂ ಬಳಸಬಹುದು. ರಂಜಕ ದೊರಕಿಸಿಕೊಡುವ ಜೀವಾಣುಗಳು ಭತ್ತ, ರಾಗಿ, ಶೇಂಗಾ, ಮುಸುಕಿನ ಜೋಳ, ಈರುಳ್ಳಿ ಹಾಗೂ ಮುಂತಾದ ಬೆಳೆಗಳಿಗೆ ಉಪಯೋಗಿಸಬಹುದು ಎಂದರು.

ಕೀಟನಾಶಕಗಳನ್ನು ಮಕ್ಕಳ ಕೈಗೆ ಸಿಗದಂತೆ ಪ್ರತ್ಯೇಕ ಸ್ಥಳದಲ್ಲಿಟ್ಟು ಬೀಗ ಹಾಕಬೇಕು. ಯಾವುದೇ ಕೀಟನಾಶಕ ಬಳಸುವುದಕ್ಕೆ ಮುಂಚೆ ಜೊತೆಯಲ್ಲಿ ಕೊಟ್ಟಿರುವ ಚೀಟಿ ಓದಬೇಕು. ಸಿಂಪರಣಾ ದ್ರಾವಣದಿಂದ ರಕ್ಷಿಸಿಕೊಳ್ಳಲು ಯಾವಾಗಲೂ ಸರಿಯಾದ ಬಟ್ಟೆಗಳನ್ನು ಧರಿಸಬೇಕು. ಸೋರುವ ಅಥವಾ ಹಾನಿಯಾಗಿರುವ ಸಿಂಪರಣಾ ಯಂತ್ರ ಉಪಯೋಗಿಸಬಾರದು. ಆಲಿಕೆಯನ್ನು ಉಪಯೋಗಿಸಿ ಕೀಟನಾಶಕವನ್ನು ತುಂಬುವಾಗ ಅದು ಹೊರ ಚೆಲ್ಲದಂತೆ ನೋಡಿಕೊಳ್ಳಬೇಕು. ಕೀಟನಾಶಕ ಸಿಂಪಡಿಸಲುತಯಾರಿಸಲಾಗಿರುವದ್ರಾವಣ ಮೈಗೆ ತಾಕದಂತೆ ನೋಡಿಕೊಳ್ಳಬೇಕು ಹಾಗೂ ಗಾಳಿ ಬೀಸುತ್ತಿರುವ ದಿಕ್ಕಿನಿಂದಲೇ ಕೀಟನಾಶಕ ದ್ರಾವಣ ಸಿಂಪಡಿಸಬೇಕು ಮತ್ತು ಗಾಳಿಗೆ ವಿರುದ್ಧವಾದ ದಿಕ್ಕಿನಲ್ಲಿ ಸಿಂಪಡಿಸಬಾರದು. ಕೀಟನಾಶಕ ಉಸಿರಿನೊಡನೆ ಒಳಗೆ ಹೋಗುವುದನ್ನು ತಡೆಯಲು ಯಾವಾಗಲೂ ಸೊಂಟದಿಂದ ಕೆಳಮಟ್ಟದಲ್ಲಿ ಸಿಂಪಡಿಸಬೇಕು ಎಂದು ಸಲಹೆ ನೀಡಿದರು.

ಸಿಂಪರಣೆಯ ನಂತರ ಸಾಬೂನಿನಿಂದ ಸ್ನಾನ ಮಾಡಿ ಬಟ್ಟೆ ಬದಲಾಯಿಸಬೇಕು. ಆನಂತರ ಆಹಾರ ಮತ್ತು ನೀರು ಸೇವಿಸಬೇಕು. ಹಾಗೂ ಸಿಂಪರಣಾ ಸಮಯದಲ್ಲಿ ಉಪಯೋಗಿಸಿದ ಬಟ್ಟೆ ಸ್ವಚ್ಛಗೊಳಿಸಬೇಕು. ಸಿಂಪರಣಾ ಸಮಯದಲ್ಲಿ ಎಲೆ–ಅಡಿಕೆ ಜಗಿಯಬಾರದು ಮತ್ತು ಧೂಮಪಾನ ಮಾಡಬಾರದು ಮತ್ತೆ ತೊಂದರೆ ಉಂಟಾದಲ್ಲಿ ಸಿಂಪಡಿಸುವುದನ್ನು ನಿಲ್ಲಿಸಿ ವೈದ್ಯರ ಸಲಹೆ ಪಡೆಯಬೇಕು. ತೆರೆದ ಅಥವಾ ಅರ್ಧದಷ್ಟು ಬಳಸಿದ ಕೀಟನಾಶಕದ ಡಬ್ಬಗಳನ್ನು ಸಂಗ್ರಹಿಸಿಡಬಾರದು. ಈ ಖಾಲಿಯಾದ ಕೀಟನಾಶಕದ ಡಬ್ಬಗಳನ್ನು ಪುನಃ ಉಪಯೋಗಿಸಬಾರದು. ಖಾಲಿಯಾದ ಡಬ್ಬವನ್ನು ನಾಶಪಡಿಸಿ ಮತ್ತು ನೆಲದೊಳಗೆ ಅದನ್ನು ಹೂತು ಹಾಕಬೇಕು ಎಂದು ಹೇಳಿದರು.

ತರಬೇತಿ ನಂತರ ಶೇಂಗಾ ಬೆಳೆಯಲ್ಲಿ ಬೀಜೋಪಚಾರ ಮಾಡುವ ವಿಧಾನವನ್ನು ಪ್ರಾತ್ಯಕ್ಷಿಕೆಯ ಮೂಲಕ ತೋರಿಸಿ ಕೊಡಲಾಯಿತು.

ತಳಕು ರೈತ ಸಂಪರ್ಕ ಕೇಂದ್ರದ ಕೃಷಿ ಆಧಿಕಾರಿ ಮಂಜುನಾಥ್, ಮತ್ತು ಪರುಶುರಾಂಪುರ ಕೃಷಿ ಅಧಿಕಾರಿಯಾದ ಜೀವನ್ ಅವರು ರೈತರಿಗೆ ಪಿಎಂ ಕಿಸಾನ್ ಯೋಜನೆಯ ನೋಂದಣಿ ಮತ್ತು ಇಕೆವೈಸಿ ಕುರಿತು ಮಾಹಿತಿ ಹಾಗೂ ರೈತರ ಬೆಳೆ ಸಮೀಕ್ಷೆ ಆಪ್ ಕುರಿತು ಮಾಹಿತಿ ನೀಡಿದರು.

ಕೃಷಿ ವಿಜ್ಞಾನಕೇಂದ್ರದ ವಿಜ್ಞಾನಿ ಡಾ. ಟಿ.ರುದ್ರಮುನಿ ಅವರು ಶೇಂಗಾ, ತೊಗರಿ, ಮೆಣಸಿನಕಾಯಿ, ತೆಂಗು ಮತ್ತು ಅಡಿಕೆ ಬೆಳೆಯ ಪ್ರಮುಖ ರೋಗ ಮತ್ತು ಕೀಟಗಳ ನಿರ್ವಹಣೆ ಕುರಿತು ಮಾಹಿತಿ ನೀಡಿದರು.

ತರಬೇತಿ ಕಾರ್ಯಕ್ರಮದಲ್ಲಿ ಉಪಕೃಷಿ ನಿರ್ದೇಶಕ ಡಾ. ಪ್ರಭಾಕರ್, ಚಳ್ಳಕೆರೆ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಅಶೋಕ್, ಕೆವಿಕೆ ಕೀಟಶಾಸ್ತ್ರಜ್ಞ ಡಾ. ಟಿ.ರುದ್ರಮುನಿ, ತಳಕು ಕೃಷಿ ಆಧಿಕಾರಿ ಮಂಜುನಾಥ್, ಪರುಶುರಾಂಪುರ ಕೃಷಿ ಅಧಿಕಾರಿ ಜೀವನ್, ಆತ್ಮಯೋಜನೆ ಮತ್ತು ಕೃಷಿ ಸಂಜೀವಿನಿ ಸಿಬ್ಬಂದಿಯವರು ಇದ್ದರು.

# ಮೈತ್ರಿ ಪಾದಯಾತ್ರೆಯಲ್ಲಿ ಜಿಲ್ಲಾ ಬಿಜೆಪಿ ಮುಖಂಡರು

» **ಚಿತ್ರದುರ್ಗ**



ಬ್ರಷ್ಠ ಕಾಂಗ್ರೆಸ್ ಪಕ್ಷದ ಮೂಡ ಹಗರಣ ಎಸ್ ಟಿ ನಿಗಮದ ಹಗರಣ ಇತರೆ ಹಗರಣಗಳನ್ನು ಖಂಡಿಸಿ ಹಮ್ಮಿಕೊಂಡಿರುವ ಮೈಸೂರು ಚಲೂ ಪಾದಯಾತ್ರೆಯ ಇಂದು ಚನ್ನಪಟ್ಟಣ ತಲುಪಿತು.

ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯಾದ್ಯಕ್ಷರಾದ ಬಿ ವೈ ವಿಜಯೇಂದ್ರ ಕೇಂದ್ರ ಸಚಿವರಾದ ಹೆಚ್ ಡಿ ಕುಮಾರಸ್ವಾಮಿ ನೇತ್ರತ್ವದಲ್ಲಿ ನಡೆಯಿತು ಸಹಸ್ರಾರು ಬಿಜೆಪಿ ಶಾಸಕರು ಪರಿಷತ್ ಸದಸ್ಯರು ಮುಖಂಡರು ವಿಧಾನ ಪರಿಷತ್ ಸದಸ್ಯರಾದ ರವಿಕುಮಾರ್ ಹುಬ್ಬಳ್ಳಿ ಶಾಸಕರಾದ ಅರವಿಂದ ಬೆಲ್ಲದ ಚಿತ್ರದುರ್ಗ ಜಿಲ್ಲಾದ್ಯಕ್ಷರಾದ ಎ ಮುರಳಿ ಜಿಲ್ಲಾ ಚಿತ್ರದುರ್ಗ ಪ್ರದಾನ ಕಾರ್ಯದರ್ಶಿಗಳಾದ ಸುರೇಶ ಸಿದ್ದಾಪುರ ಬಿಜೆಪಿ ಮುಖಂಡ ಖಜಾಂಚಿ ಮಾಧುರಿ ಗಿರೀಶ್ ಮುಖಂಡರಾದ ಕೆ ಟಿ ಕುಮಾರಸ್ವಾಮಿ, ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್ ಎಸ್ ಸಿ ಮೋರ್ಚಾ ರಾಜ್ಯ ಕಾರಿಣಿ ಸದಸ್ಯೆ ಭಾರ್ಗವಿ ದ್ರಾವಿಡ್ ಪಾದಯಾತ್ರೆಯಲ್ಲಿ ಸಾಥ್ ನೀಡಿದರು

ಚನ್ನಪಟ್ಟಣದ ಸರ್ಕಲ್‌ನಲ್ಲಿ ಬಹಿರಂಗ ಸಭೆಯನ್ನುದ್ದೇಶಿಸಿ ಮಾಜಿಮುಖ್ಯ ಮಂತ್ರಿಗಳಾದ ಬಿಎಸ್ ಯಡಿಯೂರಪ್ಪ ಕೇಂದ್ರ ಸಚಿವರಾದ ಹೆಚ್ ಡಿ ಕುಮಾರಸ್ವಾಮಿ ,ರಾಜ್ಯದ್ಯಕ್ಷರಾದ ವಿಜಯೆಂದ್ರ ವಿ ಪಕ್ಷ ನಾಯಕ ಆರ್ ಅಶೋಕ್ ನಿಖಿಲ್ ಕುಮಾಸ್ವಾಮಿ ಡಾ ಅಶ್ವಥ್ ನಾರಾಯಣ್ ಮಾತನಾಡಿದರು

# ತಾಯಿಯ ಹಾಲು ಮಕ್ಕಳಿಗೆ ಅಮೃತಕ್ಕೆ ಸಮಾನ



» **ಚಿತ್ರದುರ್ಗ**

ತಾಯಿ ಹಾಲು ಅಮೃತಕ್ಕೆ ಸಮಾನ ಮಗು ಜನಿಸಿದ ತಕ್ಷಣ ತಾಯಿಯ ಹಾಲನ್ನು ನೀಡಬೇಕು, ಹೊರಗಿನ ಹಾಲನ್ನು ಹಾಕದೆ ತಾಯಿ ಹಾಲನ್ನೇ ಅತಿ ಹೆಚ್ಚು ಹಾಕಬೇಕು ಇದರಿಂದ ರೋಗ ನಿರೋಧಕ ಶಕ್ತಿ ಹೆಚ್ಚಾಗಲಿದೆ ಎಂದು ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ವಿ.ಮಂಜುಳಾ ಹೇಳಿದರು. ನಗರದ ಮೆದೇಹಳ್ಳಿ ರಸ್ತೆಯ ಆದರ್ಶ ಕಲ್ಯಾಣ ಮಂಟಪದ ಬಳಿ ಇರುವ ಅಂಗನವಾಡಿ ಕೇಂದ್ರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಸ್ತನ್ಯ ಪಾನ ಸಪ್ತಾಹ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಶ್ವ ಸ್ತನ್ಯಪಾನ ಸಪ್ತಾಹ 2024ರ ಘೋಷ ವಾಕ್ಯ 'ಕೊರತೆಗಳನ್ನು ಕೊನೆಗೊಳಿಸಿ ಸರ್ವರಿಗೂ ಸ್ತನ್ಯಪಾನದ ಬೆಂಬಲ ನೀಡಿ' ಎನ್ನುವ ಘೋಷವಾಕ್ಯದಂತೆ ಗರ್ಭಿಣಿ ಮತ್ತು ಬಾಣಂತಿಯರು ಹಾಗೂ ಮಕ್ಕಳ ತಾಯಂದಿರಿಗೆ ಎದೆಯ ಹಾಲಿನ ಮಹತ್ವವನ್ನು ಸಾರಿದರು. ಕಾರ್ಯಕ್ರಮದಲ್ಲಿ ಅತಿಥಿಯಾಗಿ ಆಗಮಿಸಿದ ಜೆ.ಕೆ.ದಾಸಪ್ಪ ಮಾತನಾಡಿ, ಬಾಲ್ಯ ವಿವಾಹದಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಮಾಹಿತಿಯನ್ನು ನೀಡಿದರು. ಬಾಲ್ಯ ವಿವಾಹಗಳು ಕಂಡುಬಂದಲ್ಲಿ ತಕ್ಷಣ 1098 ಮಕ್ಕಳ ಸಹಾಯವಾಣಿಗೆ ಉಚಿತ ಕರೆ ಮಾಡಿ ಮಾಹಿತಿ ನೀಡಬಹುದು. ಕರೆ ಮಾಡಿದವರ ವೈಯಕ್ತಿಕ ಮಾಹಿತಿಯನ್ನು ಗೌಪ್ಯವಾಗಿ ಇಡಲಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಹಿಳಾ ಮೇಲ್ವಿಚಾರಕಿ ಎಚ್. ಎಸ್ಮಂಜುಳಾ, ಅಂಗನವಾಡಿ ಕಾರ್ಯಕರ್ತೆ ಮೀನಾಕ್ಷಿ ಬಾಯಿ, ಆರೋಗ್ಯ ಕಾರ್ಯಕರ್ತೆ, ಆಶಾ ಕಾರ್ಯಕರ್ತೆಯರು ಹಾಜರಿದ್ದರು.

# ತಾಯಿಯ ಎದೆಹಾಲು ತುಂಬ ಶ್ರೇಷ್ಠ: ಸ್ವಾಮೀಜಿ

» **ಚಿತ್ರದುರ್ಗ**




ತಾಯಿಯ ಎದೆಹಾಲು ತುಂಬ ಶ್ರೇಷ್ಠವಾದುದು ಅಮೃತವಿದ್ದಂತೆ. ಕನಿಷ್ಟ 6 ತಿಂಗಳವರೆಗೆ ತಾಯಿ ತನ್ನ ಮಗುವಿಗೆ ಹಾಲುಣಿಸಬೇಕು. ಈ ಬಗ್ಗೆ ಜಾಗೃತಿ ಮೂಡಿಸುತ್ತಿರುವುದು ಮಾದರಿಯಾಗಿದೆ ಎಂದು ಡಾ. ಬಸವಕುಮಾರ ಸ್ವಾಮೀಜಿ ತಿಳಿಸಿದರು.

ನಗರದ ಬಸವೇಶ್ವರ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಆಗಸ್ಟ್ 1ರಿಂದ 7ರವರೆಗೆ ಹಮ್ಮಿಕೊಂಡಿರುವ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀಗಳು ಮಾತನಾಡಿದರು.

ವೈದ್ಯರು ಕೂಡ ಮಗುವಿಗೆ ಎದೆಹಾಲು ಅತೀ ಮುಖ್ಯವೆಂದು ಸಲಹೆ ನೀಡುತ್ತಾರೆ. ಮಗು ತಾಯಿಯ ಹಾಲನ್ನು ಸೇವನೆ ಮಾಡುವುದರಿಂದ ಸಾಕಷ್ಟು ಪೋಷಕಾಂಶ ದೊರೆತು ಆರೋಗ್ಯಕರವಾಗಿ ಬೆಳೆಯಲು ಸಾಧ್ಯ ಆಗುತ್ತದೆ. ತಾಯಿ ಮಗುವಿನ ಬಾಂಧವ್ಯವೂ ಬೆಳೆಯುತ್ತದೆ. ಈ ರೀತಿಯ ಜಾಗೃತಿ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ಗ್ರಾಮಾಂತರ ಪ್ರದೇಶಗಳಲ್ಲಿ ನಡೆಯಲಿ ಎಂದು ಆಶಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಡೀನ್ ಡಾ.ಪ್ರಶಾಂತ್, ವೈದ್ಯಕೀಯ ಅಧೀಕ್ಷಕ ಡಾ.ರಾಜೇಶ್, ವೈದ್ಯಕೀಯ ಉಪಅಧೀಕ್ಷಕ ಡಾ। ನಾಗೇಂದ್ರಗೌಡ, ಡಾ.ಶ್ರೀನಿವಾಸ್ ಬಿ., ಡಾ.ಬಸವಂತಪ್ಪ, ಡಾ.ಲತಾ, ಡಾ.ಅರುಣ್‌ಕುಮಾರ್ ಆಸ್ಪತ್ರೆಯ ವೈದ್ಯರು, ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಇದ್ದರು.

## ಪ್ರಮುಖ ಸುದ್ದಿ

# ಹೊಳಲ್ಕೆರೆ: 8 ರಂದು ಮಲ್ಲಿಕಾರ್ಜುನ ಸ್ವಾಮೀಜಿ ಸ್ಮರಣೋತ್ಸವ

» **ಚಿತ್ರದುರ್ಗ**

ಹೊಳಲ್ಕೆರೆ ಒಂಟಿಕಂಬದ ಮುರುಘಾ ಮಠದಲ್ಲಿ ಆ.8 ರಂದು ಬೆಳಗ್ಗೆ 10.30 ಕ್ಕೆ ಚಿತ್ರದುರ್ಗ ಶ್ರೀ ಮುರುಘರಾಜೇಂದ್ರ ಬೃಹನ್ಮಠದ 26ನೆಯ ಅಧ್ಯಕ್ಷ ಶ್ರೀ ಜಗದ್ಗುರು ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಹಾಸ್ವಾಮಿಗಳವರ 30ನೇ ಸ್ಮರಣೋತ್ಸವ ಹಾಗೂ ಚಿನ್ಮೂಲಾದ್ರಿಯ ಚಿತ್ಕಳೆ ಸ್ಮರಣೋತ್ಸವ ಸಂಪುಟ ಲೋಕಾರ್ಪಣೆ ಸಮಾರಂಭ ನಡೆಯಲಿದೆ ಎಂದು ಡಾ. ಬಸವಕುಮಾರ ಸ್ವಾಮೀಜಿ ತಿಳಿಸಿದರು.

ಶ್ರೀಮಠದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಶ್ರೀಗಳು, ಜಯದೇವ ಜಗದ್ಗುರುಗಳು ಹಸಿವನ್ನು ಹಿಂಗಿಸಿದರೆ ಮಲ್ಲಿಕಾರ್ಜುನ ಜಗದ್ಗುರುಗಳು ಜ್ಞಾನದ ಹಸಿವನ್ನು ತಣಿಸಿದವರು. ಅನುಭಾವದ ನೆಲೆಯಲ್ಲಿ ಮಾತನಾಡುತ್ತಿದ್ದರು. ಮಲ್ಲಿಕಾರ್ಜುನ ಶ್ರೀಗಳವರದು ಸಾರ್ವಜನಿಕ ವಲಯದಲ್ಲಿ ಸರಳ ಮತ್ತು ವಿದ್ವತ್‌ಪೂರ್ಣವಾದ ಬದುಕಾಗಿತ್ತು ಎಂದರು.

1966ರಲ್ಲಿ ಎಸ್.ಜೆ.ಎಂ. ವಿದ್ಯಾಪೀಠವನ್ನು ಸ್ಥಾಪಿಸಿ, ಎಂಜಿನಿಯರ್ ಕಾಲೇಜಿನಿಂದ ಹಿಡಿದು ಅನೇಕ ಶಿಕ್ಷಣ ಸಂಸ್ಥೆಗಳನ್ನು ತೆರೆದರು. ತುಮಕೂರು ಸಿದ್ಧಗಂಗಾ ಮಹಾಸ್ವಾಮಿಗಳು ಮಲ್ಲಿಕಾರ್ಜುನ ಶ್ರೀಗಳನ್ನು ಕುರಿತು ಸಾಕ್ಷಾತ್ ಮುರಿಗಿ ಸ್ವಾಮಿಗಳು ಎಂದು ಹೇಳುತ್ತಿದ್ದರು. ಅವರ ಬಗ್ಗೆ ಮಾತನಾಡುವುದಕ್ಕಿಂತ ಅವರ ವ್ಯಕ್ತಿತ್ವ ದೊಡ್ಡದು. ಶ್ರೀಗಳು ಪಟ್ಟಕ್ಕೆ ಬಂದು ಮೂವತ್ತು ವರ್ಷ ಮತ್ತು ಅವರು ಲಿಂಗೈಕ್ಯರಾಗಿ 30ವರ್ಷ ಆಗುತ್ತಿರುವ ಈ ಸಂದರ್ಭವನ್ನು ಸ್ಮರಣೀಯವಾಗಿಸುವ ಹಿನ್ನೆಲೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಗಿದ್ದು, ಶ್ರೀಗಳವರ ಅಪರೂಪದ ಛಾಯಾಚಿತ್ರಗಳನ್ನು ಪ್ರದರ್ಶನ ಮತ್ತು ಶ್ರೀಗಳ ಕುರಿತು ಡಾ. ಲಕ್ಷ್ಮಣ ತೆಲಗಾವಿ ಪ್ರಧಾನ ಸಂಪಾದಕತ್ವದಲ್ಲಿ ಮತ್ತು ಕೆ.ಎಲ್. ರಾಜಶೇಖರ್ ಸಂಪಾದಕತ್ವದಲ್ಲಿ 'ಚಿನ್ಮೂಲಾದ್ರಿ ಚಿತ್ಕಳೆ' ಎಂಬ ಬೃಹತ್ ಗ್ರಂಥವನ್ನು ಲೋಕಾರ್ಪಣಗೊಳಿಸಲಾಗುವುದು ಎಂದರು.

ಈ ಕಾರ್ಯಕ್ರಮಕ್ಕೆ ಶ್ರೀ ವೀರಭದ್ರ ಚನ್ನಮಲ್ಲದೇಶೀಕೇಂದ್ರ ಮಹಾಸ್ವಾಮಿಗಳು ನಿಡುಮಾಮಿಡಿ ಮಠ, ಬೆಂಗಳೂರು, ಇಳಕಲ್‌ನ ಶ್ರೀ ಗುರುಮಹಾಂತ ಮಹಾಸ್ವಾಮಿಗಳು,




ಬೆಂಗಳೂರು ಬೇಲಿಮಠದ ಶ್ರೀ ಶಿವರುದ್ರ ಮಹಾಸ್ವಾಮಿಗಳು, ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಸ್ವಾಮಿಗಳು, ಧಾರವಾಡ ಮುರುಘಾಮಠದ ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಹೆಬ್ಬಾಳು ವಿರಕ್ತಮಠದ ಶ್ರೀ ಮಹಾಂತರುದ್ರೇಶ್ವರ ಸ್ವಾಮಿಗಳು, ರಾವಂದೂರು ವಿರಕ್ತಮಠದ ಶ್ರೀ ಮೋಕ್ಷಪತಿ ಮಹಾಸ್ವಾಮಿಗಳು, ಬೆಂಗಳೂರು ಸರ್ಪಭೂಷಣ ಮಠದ ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸವರು ಎಂದರು.

ಹರಿಹರ ಪಂಚಮಸಾಲಿ ಜಗದ್ಗುರು ಗುರುಪೀಠದ ಶ್ರೀ ಜಗದ್ಗುರು ವಚನಾನಂದ ಸ್ವಾಮಿಗಳು, ಶ್ರೀ ಮಾದಾರಚೆನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮಿಗಳು, ಶ್ರೀ ಬೋವಿಗುರುಪೀಠದ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಮಹಾಸ್ವಾಮಿಗಳು, ಕೂಡಲಸಂಗಮದ ಪಂಚಮಸಾಲಿ ಗುರುಪೀಠದ ಶ್ರೀ ಜಗದ್ಗುರು ಬಸವ ಜಯಮೃತ್ಯುಂಜಯ ಸ್ವಾಮಿಗಳು, ಹೊಸದುರ್ಗ ಕುಂಚಿಟಿಗ ಮಹಾಸಂಸ್ಥಾನ ಮಠದ ಶ್ರೀ ಶಾಂತವೀರ ಮಹಾಸ್ವಾಮಿಗಳು, ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಶ್ರೀ ಜಗದ್ಗುರು ಪ್ರಸನ್ನ ವಾಲ್ಮೀಕಿ ಸ್ವಾಮಿಗಳು, ಹೊಸದುರ್ಗ ಕನಕಗುರುಪೀಠದ ಶ್ರೀ ಈಶ್ವರಾನಂದಪುರಿ ಸ್ವಾಮಿಗಳು, ಭಗೀರಥ ಪೀಠದ ಶ್ರೀ ಪುರುಷೋತ್ತಮಾನಂದ ಪುರಿ ಸ್ವಾಮಿಗಳು, ಪಾಂಡೋಮಟ್ಟಿಯ ಶ್ರೀ ಗುರುಬಸವ ಸ್ವಾಮಿಗಳು, ಬೇಲೂರು ವಿರಕ್ತಮಠದ ಶ್ರೀ ಶಿವಬಸವ ಸ್ವಾಮಿಗಳು, ಶ್ರೀ ಮಡಿವಾಳ ಮಾಚಿದೇವ ಗುರುಪೀಠದ ಶ್ರೀ ಜಗದ್ಗುರು ಬಸವ ಮಾಚಿದೇವ ಮಹಾಸ್ವಾಮಿಗಳು ಸಮ್ಮುಖ ವಹಿಸುವರು.

ಶ್ರೀಮಠ ಮತ್ತು ಎಸ್.ಜೆ.ಎಂ. ವಿದ್ಯಾಪೀಠದ ಆಡಳಿತ ಮಂಡಳಿ ಅಧ್ಯಕ್ಷರಾದ ಶಿವಯೋಗಿ ಸಿ.ಕಳಸದ ಅಧ್ಯಕ್ಷತೆ ವಹಿಸುವರು. ಆಡಳಿತ ಮಂಡಳಿ ಸದಸ್ಯ ಎಸ್.ಎನ್. ಚಂದ್ರಶೇಖರ್ ಬಸವಮಂಟಪದ ನೂತನ ವಸತಿಗೃಹಗಳನ್ನು ಉದ್ಘಾಟಿಸುವರು. ಮುಖ್ಯಅತಿಥಿಗಳಾಗಿ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್, ಲೋಕಾಸಭೆ ಸದಸ್ಯ ಗೋವಿಂದ ಎಂ. ಕಾರಜೋಳ, ಶಾಸಕರಾದ ಎಂ. ಚಂದ್ರಪ್ಪ, ಕೆ.ಸಿ. ವೀರೇಂದ್ರ ಪಪ್ಪಿ., ಟಿ. ರಘುಮೂರ್ತಿ, ಬಿ.ಜಿ. ಗೋವಿಂದಪ್ಪ, ಎನ್.ವೈ.ಗೋಪಾಲಕೃಷ್ಣ,ವಿಧಾನಪರಿಷತ್ ಸದಸ್ಯರಾದ ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್,ಚಿದಾನಂದಗೌಡ,ಮಾಜಿಸಚಿವ ಹೆಚ್.ಆಂಜನೇಯ, ಮಾಜಿ ಶಾಸಕರಾದ ಪಿ.ರಮೇಶ್, ಎಂ.ಬಿ.ತಿಪ್ಪೇರುದ್ರಪ್ಪ, ಎ.ವಿ. ಉಮಾಪತಿ, ಟಿ.ಹೆಚ್. ಬಸವರಾಜು ಭಾಗವಹಿಸುವರು.

## ಫಾಸ್ಟ್ ನ್ಯೂಸ್

### ಫುಟ್‌ಬಾತ್‌ನಲ್ಲಿ ವ್ಯಾಪಾರ ನಿಷಿದ್ಧ, ವ್ಯಾಪಾರ ಮಾಡುವವರ ಸಾಮಗ್ರಿ ಜಪ್ತಿ

» ದಾವಣಗೆರೆ

ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವ್ಯಾಪಾರ ಮಾಡುವ ಬೀದಿಬದಿ ವ್ಯಾಪಾರಿಗಳು ಮತ್ತು ಈ ಹಿಂದೆ ಪಾಲಿಕೆಯಿಂದ ನೋಂದಾಯಿಸಲ್ಪಟ್ಟ, ನೋಂದಣಿ ಮಾಡಿಸದೇ ಇರುವ ಬೀದಿಬದಿ ವ್ಯಾಪಾರಿಗಳು ನಗರದ ರಸ್ತೆ ಬದಿಗಳಲ್ಲಿ ಪಾದಚಾರಿ ರಸ್ತೆಗಳಲ್ಲಿ ತರಕಾರಿ, ಹಣ್ಣು ಹಂಪಲು, ಹೂವು ಹಾಗೂ ಪೂಜಾ ಸಾಮಗ್ರಿಗಳ ವ್ಯಾಪಾರ ಮಾಡಲು ತಾವು ಬಳಸುವ ತಳ್ಳುವ ಗಾಡಿ, ಪೆಟ್ಟಿಗೆಗಳನ್ನು ವ್ಯಾಪಾರದ ಸ್ಥಳದಲ್ಲಿಯೇ ಶಾಶ್ವತವಾಗಿ ಇಡುತ್ತಿರುವುದರಿಂದ, ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ತಳ್ಳುವ ಗಾಡಿಗಳು, ಮಾರಾಟ ಸಾಮಗ್ರಿಗಳು ಸಾರ್ವಜನಿಕ ರಸ್ತೆ, ಫುಟ್ ಪಾತ್ ಮೇಲೆ ಕಂಡುಬಂದಲ್ಲಿ ಅವುಗಳನ್ನು ಮತ್ತು ಜಪ್ತಿ ಮಾಡುವ ಜೊತೆಗೆ ದಂಡ ವಿಧಿಸಲಾಗುವುದು ಎಂದು ಮಹಾನಗರಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

66/11 ಕೆ.ವಿ. ದಾವಣಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಫೀಡರ್‌ನಲ್ಲಿ ಹೆಚ್ಚುವರಿ ಕಂಬಗಳನ್ನು ಅಳವಡಿಸಿಕೊಂಡು ಎಲ್.ಟಿ ಮಾರ್ಗವನ್ನು ವಿಸ್ತರಣೆ ಮಾಡಲು ತುರ್ತುಕಾರ್ಯ ಹಮ್ಮಿಕೊಂಡಿರುವುದರಿಂದ ಆ.6 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಎಫ್–12 ಬಸವೇಶ್ವರ ಫೀಡರ್, ಎಸ್.ಎಸ್. ಬಡಾವಣೆ, ಬಿ.ಬ್ಲಾಕ್, ಶಾಂತಿ ನಗರ, ಕುಂದುವಾಡ ರಸ್ತೆ, ಮಹಾನಗರ ಪಾಲಿಕೆ ಕುಡಿಯುವ ನೀರಿನ ಸ್ಥಾವರ, ಬಸವೇಶ್ವರ ಬಡಾವಣೆ, ಮಹಾಲಕ್ಷ್ಮೀ ಬಡಾವಣೆ, ಬಾಲಾಜಿ ನಗರ, ಕುಂದುವಾಡ ಕೆರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವುಂಟಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ಗ್ರಾಮ ಸಹಾಯಕ ಹುದ್ದೆಗೆ ಅರ್ಜಿ ಆಹ್ವಾನ

» ದಾವಣಗೆರೆ

ದಾವಣಗೆರೆ ತಾಲ್ಲೂಕು ಆನಗೋಡು ಹೋಬಳಿಯ ಆಲೂರು ವೃತ್ತದ ಗ್ರಾಮ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಅಗತ್ಯ ದಾಖಲಾತಿಗಳೊಂದಿಗೆ ಆಗಸ್ಟ್ 20 ರೊಳಗಾಗಿ ದಾವಣಗೆರೆ ತಾಲ್ಲೂಕು ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿದಾರರು ಎಸ್.ಎಸ್. ಎಲ್.ಸಿ ಅಂಕಪಟ್ಟಿ, ವಾಸಸ್ಥಳ ದೃಢೀಕರಣ ಪತ್ರ, ಚುನಾವಣೆ ಗುರುತಿನ ಚೀಟಿ, ಪಡಿತರ ಚೀಟಿ, ವ್ಯಾಸಂಗ ಪೂರೈಸಿದ ಬಗ್ಗೆ ದಾಖಲೆ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಸ್ವಯಂ ಘೋಷಣಾ ಪತ್ರ, ವಂಶವೃಕ್ಷ, ಒಪ್ಪಿಗೆ ಪ್ರಮಾಣ ಪತ್ರ, ಚಾರಿತ್ರ್ಯದ ಬಗ್ಗೆ ಪೊಲೀಸ್ ವರದಿಯನ್ನು ಸಲ್ಲಿಸಬೇಕು ಎಂದು ತಹಶೀಲ್ದಾರ್ ಡಾ.ಅಶ್ವಥ್ ತಿಳಿಸಿದ್ದಾರೆ.

### ಆಗಸ್ಟ್ 8 ರಂದು ವ್ಯಸನ ಮುಕ್ತ ಚಿಕಿತ್ಸಾ ಶಿಬಿರ

» ದಾವಣಗೆರೆ

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಗಟೇರಿ ಜಿಲ್ಲಾ ಆಸ್ಪತ್ರೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ವಿವಿಧ ಸಂಘ, ಸಂಸ್ಥೆಗಳ ಸಹಯೋಗದಲ್ಲಿ ವ್ಯಸನ ಮುಕ್ತ ದಿನಾಚರಣೆ ಅಂಗವಾಗಿ ಆಗಸ್ಟ್ 8 ರಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ರಾಮನಗರದಲ್ಲಿನ ಗಾಂಧಿ ಭವನದಲ್ಲಿ ವ್ಯಸನ ಮುಕ್ತ ಶಿಬಿರವನ್ನು ಆಯೋಜಿಸಲಾಗಿದೆ.

ಶಿಬಿರದಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ವ್ಯಸನಿಗಳಿಗೆ ವ್ಯಸನದಿಂದ ಹೊರ ಬರಲು ವೈದ್ಯರು ಮತ್ತು ನುರಿತ ಕೌನ್ಸಿಲರ್‌ಗಳಿಂದ ಚಿಕಿತ್ಸೆ ಮತ್ತು ಸಲಹೆಯನ್ನು ನೀಡಲಾಗುತ್ತದೆ. ವ್ಯಸನಿಗಳ ತೀವ್ರತೆಯನ್ನು ಆಧರಿಸಿ ಚಿಕಿತ್ಸಾ ಸಲಹೆ ನೀಡಲಾಗುತ್ತದೆ. ಆಸಕ್ತರು ಆಗಸ್ಟ್ 8 ರಂದು ಬೆಳಗ್ಗೆ 9.30 ಕ್ಕೆ ಗಾಂಧಿ ಭವನಕ್ಕೆ ಆಗಮಿಸಿ ನೊಂದಣಿ ಮಾಡಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರಾದ ಧನಂಜಯ.ಬಿ ತಿಳಿಸಿದ್ದಾರೆ.

### ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಹೊನ್ನಾಳಿ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 5 ಅಂಗನವಾಡಿ ಕಾರ್ಯಕರ್ತೆ ಮತ್ತು 21 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 9 ಕೊನೆಯ ದಿನ. ಅರ್ಜಿಯನ್ನು ವೆಬ್ ಸೈಟ್ http:88dwcd.karnataka.gov.in ಮತ್ತು http://karnemakaone.kar.nic.in/abcd/ ಸಲ್ಲಿಸಬಹುದು

# ಶ್ರೀ ಸಿದ್ಧರಾಮೇಶ್ವರ 62ನೇ ಅದ್ದೂರಿ ರಥೋತ್ಸವ





» ಚಿತ್ರದುರ್ಗ

ಸಿದ್ಧರಾಮರ ವ್ಯಕ್ತಿತ್ವ ಹಲವು ಮುಖಗಳಲ್ಲಿ ಅರಳಿದೆ. ಸಿದ್ಧರಾಮರು ತನ್ನ ಜನಾನುರಾಗಿ ಕಾರ್ಯಗಳಿಂದ ಅಂದಿನ ಕನ್ನಡ ನಾಡಿನ ಜನಗಳ ಮನಸ್ಸಿನಲ್ಲಿ ಜೀವಂತವಾಗಿದ್ದರು. ಇವರು "ಸಮಕಾಲೀನ ಜನರಿಗೆ ಗುರುವಾಗಿ, ಉತ್ತರಕಾಲೀನರಿಗೆ ದೇವನಾಗಿ" ದರ್ಶನವನ್ನು ನೀಡುತ್ತಾರೆ ಎಂದು ಭೋವಿ ಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಹೇಳಿದರು.

ದಾವಣಗೆರೆ ನಗರದ ವೆಂಕಭೋವಿ ಕಾಲೋನಿಯಲ್ಲಿರುವ ಶ್ರೀ ಜಗದ್ಗುರು ಸಿದ್ಧರಾಮೇಶ್ವರ ಮಹಾಸಂಸ್ಥಾನ, ಭೋವಿ ಗುರುಪೀಠ ದಾವಣಗೆರೆ ಶಾಖೆಯಿಂದ ಜರುಗಿದ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ದೇವರ 62ನೇ ರಥೋತ್ಸವ ಮಠದ ಸಂಸ್ಥಾಪಕರಾದ ಲಿಂಗೈಕ್ಯ ಶ್ರೀ ಸಿದ್ದರಾಮೇಶ್ವರ ಸ್ವಾಮೀಜಿರವರ 22ನೇ ಸಂಸ್ಮರಣೋತ್ಸವದ ದಿವ್ಯಾಧ್ಯಕ್ಷತೆ ವಹಿಸಿಕೊಂಡು ಮಾತನಾಡಿದ ಶ್ರೀಗಳು ಸಿದ್ಧರಾಮರವ್ಯಕ್ತಿತ್ವಅಸಾಧಾರಣವಾದುದು. ಒಂದು ಪರಂಪರೆಯನ್ನು ಕಟ್ಟುವಲ್ಲಿನ ತಾದಾತ್ಮ, ಬದ್ಧತೆ, ಪ್ರಸಿದ್ಧಿ ಹಾಗೂ ಅವರ ದೈವತ್ವದ ಗುಣ ಒಂದು ಸಂಸ್ಕೃತಿಯನ್ನು ಹುಟ್ಟಿಹಾಕಿತು. ಸಿದ್ದರಾಮರದು ಶ್ರಮಿಕ ಪರಂಪರೆ. ಕನ್ನಡವೇ ಸಿದ್ಧರಾಮರ ಉಸಿರು ಈ ಮಣ್ಣಿನ ಭಾಷೆ, ಬಯಲ ಧರ್ಮ ಅವರ ಮಾಧ್ಯಮವಾಯಿತು. ಜನರನ್ನು ಪ್ರೀತಿಸುವ ಜನಮುಖಿ ವ್ಯಕ್ತಿತ್ವ, ಸಮಾಜದ ಕಷ್ಟಕೋಟಲೆಗಳಿಗೆ ತುಡಿಯುವ, ಸ್ಪಂದಿಸುವ ತಾಯಿ ಹೃದಯ ಮಹಿಳೆಯರನ್ನು, ನೊಂದವರನ್ನು, ಅಶಕ್ತರನ್ನು ಪ್ರೀತಿಯಿಂದ ಕಾಣುವ, ಅವರಿಗೆ ಬದುಕನ್ನು ಕಲ್ಪಿಸಿಕೊಡುವ ಅಂತಃಕರಣ ಆ ನಿಟ್ಟಿನಲ್ಲಿ ತಾನು ಕಟ್ಟಿದ ನಿರ್ವಹಿಸಿದ ಕೆರೆ, ಕಟ್ಟೆ, ಕಾಲುವೆ, ಬಾವಿ, ಛತ್ರ, ಮಂದಿರ, ಶಿಕ್ಷಣ ಕ್ಷೇತ್ರಗಳು ಇತರೆ ಸಾಮಾಜಿಕ ಕೆಲಸಗಳೊಡನೆ ಇದ್ದರೂ ಅವುಗಳನ್ನೇ ತನ್ನ ಕಾರುಬಾರು ಮಾಡಿಕೊಳ್ಳದ ಜಂಗಮತನ ಸಿದ್ದರಾಮರನ್ನು ಇತರ ಆಧ್ಯಾತ್ಮ ಶರಣ ಜೀವಿಗಳಿಗಿಂತ ವಿಭಿನ್ನ ಮಾಡಿತು. ಸಮಾಜ ಸುಧಾರಣೆಯ ಚಿಂತನೆ, ಒಳನೋಟ ಸಿದ್ಧರಾಮ ಸಂಸ್ಕೃತಿ ನೆಲೆಯೂರಲು ಕಾರಣವಾಯಿತು. "ದೇಹವನ್ನೇ ದೇಗುಲವಾಗಿಸಿಕೊಂಡ" ಶರಣ ಸಂಸ್ಕೃತಿಯನ್ನು ಒಪ್ಪಿಕೊಂಡೂ ತನ್ನತನವನ್ನು ಉಳಿಸಿಕೊಂಡು ಮೇರುಮಟ್ಟಕ್ಕೆ ಬೆಳೆದದ್ದು ಸಿದ್ಧರಾಮರ ಸಂಸ್ಕೃತಿ. ಮಠಮಾನ್ಯಗಳನ್ನು ಕಟ್ಟಿಯೂ ಅಲ್ಲಿರದ, ಸಾಮಾಜಿಕ ವ್ಯಕ್ತಿಯಾದರೂ ಆಧ್ಯಾತ್ಮ ಚಿಂತಕನಾದ, ಒಂದು ನಾಡು ಮಾತನಾಡುವಷ್ಟು ಕೆಲಸವನ್ನು ತನ್ನ ಒಳಗಣ್ಣಿನ ಬೆಳಕಿನಿಂದ ವ್ಯಕ್ತಿಯೊಬ್ಬ ಶಕ್ತಿಯಾಗಿ ನಿರ್ವಹಿಸಿದ ರೀತಿ ಅನನ್ಯವಾದುದು. ಶ್ರಮ ಸಂಸ್ಕೃತಿ ಸಿದ್ಧರಾಮ ಸಂಸ್ಕೃತಿಯ ಆತ್ಮ. ಈ ಚಿಂತನೆಯೇ ಎಲ್ಲರನ್ನು ಸಮಾನವಾಗಿ ಪ್ರೀತಿಸುವ, ಎಲ್ಲರಿಗೂ ಬದುಕು ನೀಡುವ ಚೈತನ್ಯದ ಆಧಾರ ಗುಣ. "ಶಿವಯೋಗಿಯ ಶರೀರ ವೃಥಾ ಸವೆಯಲಾಗದು, ಅನುಗೊಂಬನಿತು ಕಾಯಕ ನಡೆಯಬೇಕು" ಎಂಬ ಕಾಯಕ ನಿಷ್ಠೆಯೇ ಸಿದ್ಧರಾಮ ಸಂಸ್ಕೃತಿಯ ಮೂಲಾಧಾರ. ತನ್ನ ಅಮೋಘ ವ್ಯಕ್ತಿತ್ವದಿಂದಾಗಿ ಬದುಕಿದ್ದಾಗಲೇ ದಂತಕತೆಯಾದವರು ಸಿದ್ಧರಾಮರು. ಹೊಸ ಪರಂಪರೆಯ ಸಂಸ್ಕೃತಿಯೊಂದಕ್ಕೆ ದಾರಿಯಾದ ವರು ಎಂದು ತಿಳಿಸಿದರು.

ವಾಲ್ಮೀಕಿ ಗುರುಪೀಠದ ಜಗದ್ಗುರು ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ ಮಾತನಾಡಿ ಸಿದ್ಧರಾಮನ ಜೀವನವನ್ನು ಗಮನಿಸಿದಾಗ, ಅವನಿಗೆ ಆತ್ಮಜ್ಞಾನಿ ಅಲ್ಲಮಪ್ರಭುವಿನ ದರ್ಶನವಾಗುವವರೆಗೆ, ನಾಥಪರಂಪರೆ ಚಿಂತನೆಯ ಪರಮಾರ್ಥ, ಇಹ–ಪರ, ಸ್ವರ್ಗ– ನರಕ, ಮಡಿ– ಮೈಲಿಗೆ, ಪೂರ್ವಜನ್ಮ–ಪುನರ್ಜನ್ಮ, ವರ್ಣ–ವರ್ಗ, ಸ್ತ್ರೀ–ಪುರುಷ, ಶಾಂತಿ– ಸಮಾರಾಧನೆ, ತೀರ್ಥಯಾತ್ರೆ, ಹೋಮ–ಹವನ, ಪೂಜೆ–ಹರಕೆ, ಗುಡಿ– ಗುಂಡಾರ ಇಂತಹ ಅರ್ಥಹೀನ ಪದ್ಧತಿ ಮತ್ತು ಆಚರಣೆಗಳೇ ಧರ್ಮವೆಂಬ ನಂಬಿಕೆಯಲ್ಲಿದ್ದ. ಆದರೆ ಶರಣ ಸಿದ್ಧಾಂತದ ಗುರು–ಲಿಂಗ–ಜಂಗಮದ ಅರಿವಾದ ನಂತರ, ಕಾಯಕ, ದಾಸೋಹ, ಅನುಭಾವಗಳು ಅರ್ಥವಾದಾಗ ಅವನು ಪೂರ್ಣ ಪರಿವರ್ತನೆಗೊಳ್ಳುತ್ತಾನೆ ಎಂದು ತಿಳಿಸಿದರು.ವಿರಕ್ತಮಠದ ಬಸವಪ್ರಭು ಶ್ರೀಗಳು ಮಾತನಾಡಿ ಸಿದ್ದರಾಮರ ಆದ್ಯ ಉದ್ದೇಶವೇ ವ್ಯಕ್ತಿಗತ ಪರಿವರ್ತನೆ. ವ್ಯಕ್ತಿ ಪರಿವರ್ತನೆಗೊಂಡರೆ, ಸಹಜವಾಗಿಯೇ ಸಮುದಾಯದ ಪರಿವರ್ತನೆಯಾಗುತ್ತದೆ. ಅಂತಹ ವ್ಯಕ್ತಿಗತ ಪರಿವರ್ತನೆಗೆ ಸಿದ್ಧರಾಮ ಒಂದು ಉಜ್ವಲ ನಿದರ್ಶನ. ಲಕ್ಷ ಲಕ್ಷ ಸಂಖ್ಯೆಯಲ್ಲಿದ್ದ ಭಕ್ತ ಸಮುದಾಯವೆಲ್ಲ ಸ್ವಾಭಾವಿಕವಾಗಿಯೇ ಸಿದ್ದರಾಮನ ಶರಣ ಮಾರ್ಗವನ್ನು ಅನುಸರಿಸಲಿ ಎಂದು ಕರೆ ನೀಡಿದರು.

ಅಂಬಿಗರ ಗುರುಪೀಠದ ಜಗದ್ಗುರು ಶ್ರೀ ಶಾಂತಬೀಷ್ಮ ಚೌಡಯ್ಯ ಸ್ವಾಮೀಜಿ ಮಾತನಾಡಿ ಶುಷ್ಕ ಆಚರಣೆಗಳು, ಕಂದಾಚಾರಗಳು, ಮೂಢನಂಬಿಕೆಗಳು, ಆಡಂಬರದ ಡಾಂಬಿಕ ಆಚರಣೆಗಳು, ನಡೆ–ನುಡಿಗಳಲ್ಲಿ ಹೊಂದಾಣಿಕೆಯಿಲ್ಲದ ನೈತಿಕ ಹೀನಸ್ಥಿತಿ, ದೀನ– ದಲಿತರ ಶೋಷಣೆಗಳನ್ನು ಕಂಡು ಅವರ ಮನಸ್ಸು ಮರುಗಿತು. ಸರ್ವಜೀವಿಗಳಿಗೆ ಒಳಿತನ್ನುಂಟು ಮಾಡುವ ಸಂಕಲ್ಪದಿಂದ ಅವರು ತರ–ತಮ ಭಾವವಿಲ್ಲದ ಸಮಾನತೆಯ ಸುಂದರ ಸಮಾಜವನ್ನು ನಿರ್ಮಿಸಲು ನಿರ್ಧರಿಸಿದರು. ಅಂಧಾನುಕರಣೆ, ದೇವರ ಹೆಸರಿನಲ್ಲಿ ನಡೆಯುತ್ತಿದ್ದ ಶೋಷಣೆಗಳ ವಿರುದ್ಧ ಸಮರವನ್ನೇ ಸಾರಿದರು.ದಯೆ,ಕರುಣೆಗಳೇ ಧರ್ಮದ ಹೃದಯವೆಂದು ಒತ್ತಿ ಹೇಳಿದರು. ಮಾನವೀಯತೆ, ಅನುಕಂಪಗಳು ಧರ್ಮದ ತಳಹದಿಗಳಾಗಿರಬೇಕು ಎಂದು ಮನವರಿಕೆ ಮಾಡಿದರು. ವಿಗ್ರಹಾರಾಧನೆ, ಯಜ್ಞ ವಿಧಿಗಳು, ಅಸ್ಪೃಶ್ಯತೆ ಮತ್ತು ಹೆಣ್ಣಿನ ಬಗೆಗಿನ ಹೀನ ನಡೆವಳಿಕೆಗಳನ್ನು ಕಟುವಾಗಿ ವಿರೋಧಿಸಿದರು. ಪ್ರತಿಯೊಬ್ಬ ವ್ಯಕ್ತಿಯೂ ಸ್ವತಂತ್ರವಾಗಿ ಆಲೋಚಿಸಲು ಕಲಿಸಿದರು. ಮನಶ್ಶುದ್ಧಿ ಮತ್ತು ನೈತಿಕ ಪರಿಶುದ್ಧ ಜೀವನದ ಮೇಲ್ಮೆಯನ್ನು ಎತ್ತಿಹಿಡಿದರು. ಜ್ಞಾನೋದಯವೇ ಜೀವನದ ಪರಮ ಗುರಿಯಾಗಬೇಕು ಎಂದು ತಿಳಿ ಹೇಳಿದರು. ದೀನ–ದಲಿತರಿಗೆ ಸಮಾನ ಸ್ಥಾನಮಾನಗಳನ್ನು ದೊರಕಿಸಿದರು. ಅವರಿಗೆ ಮಾತು ಕಲಿಸಿದ್ದು ಮಾತ್ರವಲ್ಲದೆ, ಬದುಕುವುದನ್ನೂ ಕಲಿಸಿದರೆಂದು ತಿಳಿಸಿದರು.

## ನಿರುದ್ಯೋಗಿ ಮಹಿಳೆಯರು ತರಬೇತಿ ಸದುಪಯೋಗ ಪಡೆಸಿಕೊಳ್ಳಿ: ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ವೇಮಣ್ಣ

» ಚಿತ್ರದುರ್ಗ

ನಿರುದ್ಯೋಗಿ ಮಹಿಳೆಯರು ಟೈಲರಿಂಗ್, ಕಂಪ್ಯೂಟರ್ ಆಧಾರಿತ ಎಂಬ್ರಾಯಡರಿ ತರಬೇತಿಯ ಸದುಪಯೋಗ ಪಡೆಸಿಕೊಂಡು ಸ್ವಾವಲಂಭಿ ಜೀವನ ನಡೆಸಬೇಕು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ವೇಮಣ್ಣ ಹೇಳಿದರು.

ಇತ್ತೀಚೆಗೆ ಚಿತ್ರದುರ್ಗ ನಗರದ ಜನಶಿಕ್ಷಣ ಕಚೇರಿಯಲ್ಲಿ ಮಹಿಳೆಯರಿಗಾಗಿ ಆಯೋಜಿಸಲಾಗಿದ್ದ ಸ್ವ ಉದ್ಯೋಗ ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು. ಜನ ಶಿಕ್ಷಣ ಸಂಸ್ಥೆ 3 ವರ್ಷಗಳಿಂದ



ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶದ ನಿರುದ್ಯೋಗ ಯುವಕ ಯುವತಿಯರಿಗೆ ಸ್ವ ಉದ್ಯೋಗ ತರಬೇತಿ ನೀಡದೆ. ಟೈಲರಿಂಗ್ ಹಾಗೂ ಎಂಬ್ರಾಯಡರಿ ಜೊತೆಗೆ ಎಲೆಕ್ಟ್ರೀಷಿಯನ್, ಪಂಬ್ಲಿಂಗ್ ಸೇರಿದಂತೆ ಹಲವು ಉದ್ಯೋಗಗಳ ತರಬೇತಿ ಲಭ್ಯವಿದೆ. ಜಿಲ್ಲೆಯ ಯುವಕರು ಇದರ ಸದುಪಯೋಗ ಪಡೆಸಿಕೊಳ್ಳಬೇಕು. ತರಬೇತಿ ನಂತರ ಸ್ವ ಉದ್ಯೋಗ ಕೈಗೊಳ್ಳಲು ಬ್ಯಾಂಕುಗಳಿಂದ ನೆರವು ದೊರಕಲಿದೆ ಎಂದರು. ಈ ವೇಳೆ ಜಿಲ್ಲಾ ಮಕ್ಕಳಾ ರಕ್ಷಣಾ ಸಮಿತಿ ಅಧ್ಯಕ್ಷ ಡಾ.ಪ್ರಭಾಕರ್, ಕಾರ್ಯಕ್ರಮಾಧಿಕಾರಿ ಭರತ್ ಇದ್ದರು. ತರಬೇತಿ ಆಸಕ್ತಿ ಉಳ್ಳವರು ಮೊಬೈಲ್ ಸಂಖ್ಯೆ 6360710221ಕ್ಕೆ ಸಂಪರ್ಕಿಸಬಹುದು.

## ಪೌಷ್ಠಿಕ ಆಹಾರ ಸೇವಿಸಲು ಸಲಹೆ



» ಚಿತ್ರದುರ್ಗ

ಗರ್ಭಿಣಿ ತಾಯಂದಿರು ಪೌಷ್ಠಿಕ ಆಹಾರ ಸೇವಿಸಬೇಕು ಎಂದು ಜಿಲ್ಲಾ ಪೌಷ್ಠಿಕ ಆಹಾರ ಮೇಲ್ವಿಚಾರಕ ಸಣ್ಣರಂಗಮ್ಮ ಸಲಹೆ ನೀಡಿದರು.

ನಗರದ ಬಾರ್‌ಲೈನ್ ಸಮೀಪದ ಅಂಗನವಾಡಿ ಕೇಂದ್ರದಲ್ಲಿ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ತಾಯಿಯ ಎದೆಹಾಲು ಅಮೃತಕ್ಕೆ ಸಮ. ಇದು ದಿವ್ಯೌಷಧಿಯಾಗಿದ್ದು, ದೇವರ ಕೊಟ್ಟ ವರ. ಪ್ರತಿಯೊಬ್ಬ ತಾಯಿಯೂ ಆರು ತಿಂಗಳವರೆಗೆ ಎದೆಹಾಲು ಕುಡಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಬುದ್ಧನಗರದ ಆರೋಗ್ಯ ಸಿಬ್ಬಂದಿಗಳಾದ ಗುರುಮೂರ್ತಿ, ಶ್ರೀನಿವಾಸ ಸೇರಿದಂತೆ ಆಶಾಕಾರ್ಯಕರ್ತರು, ಶಾಲಾ ಶಿಕ್ಷಕಿಯರು ಇದ್ದರು.

**ಪ್ರಮುಖ ಸುದ್ದಿ**

# ಅರ್ಹತೆಯ ಆಧಾರದ ಮೇಲೆ ಪ್ರೌಢ ಶಾಲೆಗೆ ಬಡ್ತಿ ನೀಡಿ

» ಚಿತ್ರದುರ್ಗ

2017ರ ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು 2016ಕ್ಕಿಂತ ಮೊದಲು ನೇಮಕಾತಿಯಾದವರಿಗೆ ಪೂರ್ವಾನ್ವಯಗೊಳಿಸಬಾರದು ಹಾಗೂ ಇದರಿಂದ ಪ್ರಾಥಮಿಕ ಶಾಲಾ ಸೇವಾ ನಿರತ ಶಿಕ್ಷಕರಿಗಾಗಿರುವ ಅನ್ಯಾಯವನ್ನು ಸರಿಪಡಿಸಬೇಕು, ಅರ್ಹ ಪ್ರಾಥಮಿಕ ಶಾಲಾ ಶಿಕ್ಷಕರಿಗೆ 2016ರ ಪೂರ್ವದಂತೆ ಅರ್ಹತೆಯ ಆಧಾರದ ಮೇಲೆ ಪ್ರೌಢ ಶಾಲೆಗೆ ಬಡ್ತಿ ನೀಡಬೇಕು ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರಿಗೆ 2016ರ ಪೂರ್ವದಂತೆ ಮುಖ್ಯ ಗುರುಗಳ ಹಾಗೂ ಹಿರಿಯ ಮುಖ್ಯ ಗುರುಗಳ ಹುದ್ದೆಗೆ ಸೇವಾ ಜೇಷ್ಠತೆಯ ಆಧಾರದ ಮೇಲೆ ಬಡ್ತಿ ನೀಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ತಾಲ್ಲೂಕು ಸಂಘದ ವತಿಯಿಂದ ತಹಶೀಲ್ದಾರ್‌ರವರಿಗೆ ಸೋಮವಾರ ಮನವಿಯನ್ನು ಸಲ್ಲಿಸಲಾಯಿತು.



ಕರ್ನಾಟಕ ರಾಜ್ಯವು ಶಾಲಾ ಶಿಕ್ಷಣದಲ್ಲಿ ಅನೇಕ ಹೊಸ ಉಪಕ್ರಮಗಳನ್ನು ತರುವುದರ ಮೂಲಕ ದೇಶದಲ್ಲಿ ಮಾದರಿಗಳನ್ನು ನಿರ್ಮಿಸಿದೆ, ಕಾಲಕಾಲಕ್ಕೆ ಆಗುವ ಶೈಕ್ಷಣಿಕ ಬದಲಾವಣೆಗಳನ್ನು ನಮ್ಮ ರಾಜ್ಯದಲ್ಲೂ ಶಾಲಾ ಶಿಕ್ಷಣ ಇಲಾಖೆ ಸಮರ್ಪಕವಾಗಿ ನಿರ್ವಹಿಸುತ್ತಾ ಬಂದಿರುವುದು ಶ್ಲಾಘನೀಯ. ಕರ್ನಾಟಕ ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಸುಮಾರು 1,88,532 ಶಿಕ್ಷಕರಲ್ಲಿ ಹಿರಿಯ ಮುಖ್ಯ ಶಿಕ್ಷಕರು, ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ವಿಶೇಷ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಾ 1 ರಿಂದ 7, 1 ರಿಂದ 8ನೇ ತರಗತಿಗಳನ್ನು ಸಮರ್ಥವಾಗಿ ನಿರ್ವಹಣೆ ಮಾಡುತ್ತಾ ಬಂದಿದ್ದಾರೆ.ಓಅಖಿಇ ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿಯ ಶಿಫಾರಸ್ಸುಗಳಿಗೆ ಅನುಕೂಲವಾಗುವಂತೆ ರಾಜ್ಯದ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯ ಪದನಾಮವನ್ನು ಬದಲಾಯಿಸಿ, ಹೊಸ ವೃಂದ ಹಾಗೂ ವೃಂದ ಬಲವನ್ನು ನಿರ್ಧರಿಸುವ ಕುರಿತು ಆದೇಶ ಹೊರಡಿಸಿದ ಪ್ರಾಥಮಿಕ ಶಾಲಾ ಸಹ ಶಿಕ್ಷಕ ವೃಂದವನ್ನು ಮುಖ್ಯವಾಗಿ ಪ್ರಾಥಮಿಕ ಶಾಲಾ ಶಿಕ್ಷಕರು 1 ರಿಂದ 5ಕ್ಕೆ1,12,467 ಹಾಗೂ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರು 6 ರಿಂದ 8ಕ್ಕೆ 51,781 ಎಂದು ವೃಂದವಾರು ಹುದ್ದೆಗಳನ್ನು ಮಂಜೂರಿಸಿ ಆದೇಶಿಸಿದೆ. ತತ್ಪರಿಣಾಮವಾಗಿ 2016ಕ್ಕಿಂತ ಮೊದಲು 1 ರಿಂದ 7, 1 ರಿಂದ 8 ವೃಂದಕ್ಕೆ ನೇಮಕಾತಿಯಾದ ಎಲ್ಲಾ ಸಹಶಿಕ್ಷಕರು ಪ್ರಾಥಮಿಕ ಶಾಲಾ ಶಿಕ್ಷಕರು 1 ರಿಂದ 5 ಎಂದು ಪರಿಗಣಿಸಿದ್ದು, ಶಿಕ್ಷಕರಿಗೆ ತೀವ್ರ ಅನ್ಯಾಯವಾಗಿದೆ. 2017ರ ಹೊಸ ವೃಂದಬಲ ನಿಗದಿಯಾಗುವವರೆಗೆ ಪ್ರಾಥಮಿಕ ಶಾಲಾ ಸಹ ಶಿಕ್ಷಕ ವೃಂದದಿಂದ ಪ್ರೌಢಶಾಲಾ ಸಹ ಶಿಕ್ಷಕ ಗ್ರೇಡ್–2 ವೃಂದಕ್ಕೆ ನಿಯಮಿತವಾಗಿ ಬಡ್ತಿ ನೀಡುವಲ್ಲಿ ಯಾವುದೇ ಸಮಸ್ಯೆಗಳು ಇರಲಿಲ್ಲ. ಪ್ರಾಥಮಿಕ ಶಾಲೆಗಳಲ್ಲಿ 2017ರ ಹೊಸ ವೃಂದ ಬಲ ನಿಗದಿಯಿಂದಾಗಿ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್–2ವೃಂದಕ್ಕೆ ಬಡ್ತಿ ನೀಡುವಾಗ ಗೊಂದಲಗಳು ಉಂಟಾದುದ್ದನ್ನು ನಮ್ಮ ಸಂಘಟನೆಯು ಬಲವಾಗಿ ತಿಳಿಸುತ್ತಾ ಬಂದಿದ್ದರೂ, ಅದನ್ನು ಪರಿಹರಿಸದೇ, ಮುಂದೂಡುತ್ತಾ ಬರಲಾಗಿದೆ.

1 ರಿಂದ 5 ಪ್ರಾಥಮಿಕ ಶಾಲಾ ಶಿಕ್ಷಕರೆಂದು ಪದನಾಮೀಕರಿಸಿರುವ 2016ಕ್ಕಿಂತ ಮೊದಲು ನೇಮಕವಾದ 1 ರಿಂದ 7, 1 ರಿಂದ 8 ವೃಂದದಪ್ರಾಥಮಿಕ ಶಾಲಾ ಸಹ ಶಿಕ್ಷಕರಲ್ಲಿ ಸುಮಾರು 80000ಕ್ಕೂ ಅಧಿಕ ಶಿಕ್ಷಕರು ಪದವಿಯೊಂದಿಗೆ ಬಿ.ಇಡಿ ವಿದ್ಯಾರ್ಹತೆ ಹೊಂದಿದ್ದರೂ ಇವರನ್ನು 6 ರಿಂದ8ಕ್ಕೆ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರೆಂದು ಪರಿಗಣಿಸದೇ ಇರುವುದು ದುರಾದೃಷ್ಟಕರ. ಇದರ ನಡುವೆ 2016ರಿಂದ ಇತ್ತೀಚೆಗೆ 6ರಿಂದ 8 ವೃಂದದ20110 ಶಿಕ್ಷಕರ ನೇಮಕಾತಿಯಾಗಿದ್ದು, ತತ್ಪರಿಣಾಮದಿಂದಾಗಿ ಅಷ್ಟೇ ಸಂಖ್ಯೆಯ 1 ರಿಂದ 5 ವೃಂದದ ಶಿಕ್ಷಕರ ಹೆಚ್ಚುವರಿ ಸಮಸ್ಯೆ ಸೃಷ್ಟಿಯಾಗಿತ್ತು. ಅದೇರೀತಿ ವರ್ಗಾವಣೆ ಪ್ರಕ್ರಿಯೆಯಲ್ಲೂ ಈ ವೃಂದ ಬಲದ ನಿಗದಿ ಸ್ಥಳಗಳ ಆಯ್ಕೆಯಲ್ಲಿ ತೀವ್ರವಾಗಿ ಶಿಕ್ಷಕರಿಗೆ ಸಮಸ್ಯೆ ಸೃಷ್ಟಿಸಿದೆ.ಇದರ ಜೊತೆಯಲ್ಲಿ ವೃಂದಬಲ ನಿಗದಿಯಿಂದ ವೇತನ ಶ್ರೇಣಿ ವ್ಯತ್ಯಾಸವಾಗಿ ಶಿಕ್ಷಕರ ಮನೋಸ್ಥೈರ್ಯದ ಮೇಲೆ ಋಣಾತ್ಮಕಪರಿಣಾಮವಾದಾಗ್ಯೂ, ಈಗಿನವರೆಗೂ 1 ರಿಂದ 5 ಶಿಕ್ಷಕ ವೃಂದದವರೆಂದು ಪರಿಗಣಿತವಾದ 1 ರಿಂದ 7, 1 ರಿಂದ 8ಕ್ಕೆ ನೇಮಕಾತಿ ಯಾದ ಶಿಕ್ಷಕರು ಯಾವುದೇ ಆರ್ಥಿಕ ಸೌಲಭ್ಯ ಬಯಸದೇ, 6 ರಿಂದ 8ನೇ ತರಗತಿ ನಿರ್ವಹಣೆ ಹಾಗೂ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುತ್ತಾ ಬಂದಿದ್ದಾರೆ. ಇದೇಸಂದರ್ಭದಲ್ಲಿ 6 ರಿಂದ 8ನೇ ತರಗತಿಗೆ ನೇಮಕವಾದ 20110 ಶಿಕ್ಷಕರು ಕೇವಲ 6 ರಿಂದ 8ನೇ ತರಗತಿ ಬೋಧನೆ ಮಾತ್ರ ಮಾಡುತ್ತಿದ್ದು,1 ರಿಂದ 5ನೇ ತರಗತಿ ಬೋಧನೆಯಲ್ಲಿ ಭಾಗವಹಿಸುತ್ತಿಲ್ಲ. ಆದರೆ 1 ರಿಂದ 7 ಮತ್ತು 1 ರಿಂದ 8ಕ್ಕೆ ನೇಮಕಾತಿಯಾದ ಪ್ರಾಥಮಿಕ ಶಾಲಾ ಸಹಶಿಕ್ಷಕರು ಇಲಾಖೆಗೆ ಮುಜುಗರವಾಗದಂತೆ 1 ರಿಂದ 8ನೇ ತರಗತಿವರೆಗಿನ ಎಲ್ಲಾ ಶೈಕ್ಷಣಿಕ ಚಟುವಟಿಕೆಗಳನ್ನು ಸಮರ್ಥವಾಗಿ ನಡೆಸಿಕೊಂಡುಬರುತ್ತಿದ್ದಾರೆ.ಸಾಮಾಜಿಕ ನ್ಯಾಯದ ಪರ ಧ್ವನಿಯಾಗಿರುವ ತಾವುಗಳು ಲಕ್ಷಾಂತರ ಪ್ರಾಥಮಿಕ ಶಾಲಾ ಶಿಕ್ಷಕರಿಗಾದ ಅನ್ಯಾಯವನ್ನು ಗಂಭೀರವಾಗಿ ಪರಿಗಣಿಸಿ, ತುರ್ತಾಗಿ ಒಂದು ಕಾರ್ಯಕಾರಿ ಆದೇಶವನ್ನು ಹೊರಡಿಸಲು ಸರಕಾರವನ್ನು ಒತ್ತಾಯಿಸಬೇಕು. ಈ ಮೂಲಕ ಉಲ್ಲಂಘನೆಯಾಗಿರುವ ನಿಯಮಗಳನ್ನು ಸರಿಪಡಿಸುವುದರ ಜೊತೆಗೆ ನಿರಂತರ ಸೇವಾನುಭವ ಮತ್ತು ಉನ್ನತ ವಿದ್ಯಾರ್ಹತೆ ಹೊಂದಿರುವ ಸೇವಾನಿರತ ಶಿಕ್ಷಕರಿಗೆ ಯಾವುದೇ ರೀತಿಯ ತಾರತಮ್ಯ, ಅನ್ಯಾಯವಾಗದಂತೆ ನಿಯಮ ರೂಪಿಸಬೇಕು ಎಂದು ಆಗ್ರಹಿಸಲಾಯಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T